ಸಂಪುಟ 01 । ಸಂಚಿಕೆ 187 ಸೋಮವಾರ 19 ಅಕ್ಟೋಬರ್ 2026 । ಪುಟ 4 । ಬೆಲೆ–2 ರೂ.

Posting registration number : RCR/RNP/116/2026-2028

ಇರ್ಫಾನ್ ಕೆ
ಸಂಪಾದಕರು

MA ವಹಾಬ್
ಪ್ರಧಾನ ಸಂಪಾದಕರು

ನೈಜ್ಯ ದೆಸೆ
NAIJYA DESE

ಸತ್ಯದ ದಿಕ್ಕು TRUE PATH

ಸಿಂಧನೂರು, ಮಸ್ಕಿ
ಮಾನ್ವಿ, ಅಂಗಸೂರು,
ರಾಯಚೂರ,ದೇವದುರ್ಗ
ಬಳ್ಳಾರಿ, ಕೊಪ್ಪಳ
ಯಾದಗಿರಿ, ಕಲಬುರ್ಗಿ,
ಬೀದರ, ವಿಜಯಪುರ.
ಗದಗ, ವಿಜಯನಗರ.
ಏಕಕಾಲಕ್ಕೆ ಪ್ರಕಟಣೆ

ಕನ್ನಡ ದಿನ ಪತ್ರಿಕೆ

REGIONAL KANNADA DAILY MORNING

RNI code: KNKAN/25/A3581 ಮೋ: 9902277588, 9880707587, 9008787586 naijyadese@gmail.com

50 ವರ್ಷಗಳ ಆರೋಗ್ಯ ಸೇವೆ.....

ಬಳಗಾನೂರಿಗೆ ಇನ್ನೂ ಸಿಗದ ಸಮುದಾಯ ಆರೋಗ್ಯ ಕೇಂದ್ರದ ಭಾಗ್ಯ!



35 ಹಳ್ಳಿಗಳ ಜನರ ಆರೋಗ್ಯ ರಕ್ಷಣೆಗೆ ಸಿಎಚ್‌ಸಿ ಅಗತ್ಯ – ಶಾಸಕ ಬಸನಗೌಡ ತುರ್ವಿಹಾಳ ಅವರು ವಿಶೇಷ ಮುತುವರ್ಜಿ ವಹಿಸಲಿ

ನೈಜ್ಯ ದೆಸೆ ನ್ಯೂಸ್

ಬಳಗಾನೂರು: ಸುಮಾರು ಐದು ದಶಕಗಳಿಂದ ಬಳಗಾನೂರು ಪಟ್ಟಣ ಹಾಗೂ ಸುತ್ತಮುತ್ತಲಿನ ಸುಮಾರು 35 ಹಳ್ಳಿಗಳ ಜನರಿಗೆ ಆರೋಗ್ಯ ಸೇವೆ ಒದಗಿಸುತ್ತಿರುವ ಪ್ರಾಥಮಿಕ ಆರೋಗ್ಯ ಕೇಂದ್ರವನ್ನು ಸಮುದಾಯ ಆರೋಗ್ಯ ಕೇಂದ್ರವಾಗಿ (CHC) ಮೇಲ್ದರ್ಜೆಗೇರಿಸಬೇಕೆಂಬ ಬೇಡಿಕೆ ಇದೀಗ ಮಹತ್ವ ಪಡೆದುಕೊಂಡಿದೆ.ಬಳಗಾನೂರು ಪಟ್ಟಣವು ಪಟ್ಟಣ ಪಂಚಾಯತ್ ಆಗಿ ರೂಪುಗೊಂಡು ಸುಮಾರು ಎಂಟು ವರ್ಷಗಳು ಕಳೆದಿದ್ದರೂ, ಇಲ್ಲಿನ ಪ್ರಾಥಮಿಕ ಆರೋಗ್ಯ ಕೇಂದ್ರಕ್ಕೆ ಇನ್ನೂ ಸಮುದಾಯ ಆರೋಗ್ಯ ಕೇಂದ್ರದ ಸ್ಥಾನಮಾನ ದೊರೆತಿಲ್ಲ. ಜನಸಂಖ್ಯೆಯ ಅಗತ್ಯಗಳು, ಸುತ್ತಮುತ್ತಲಿನ ಗ್ರಾಮಗಳ ಅವಲಂಬನೆ ಹಾಗೂ ಗ್ರಾಮೀಣ ಆರೋಗ್ಯ ಸೇವೆಯ ಮಹತ್ವವನ್ನು ಪರಿಗಣಿಸಿ ಸರ್ಕಾರ ಈ ಬೇಡಿಕೆಗೆ ಸ್ಪಂದಿಸಬೇಕೆಂಬುದು ಸ್ಥಳೀಯರ ಆಶಯವಾಗಿದೆ.

35 ಹಳ್ಳಿಗಳ ಜನರಿಗೆ ಬಳಗಾನೂರು ಪಿಎಚ್‌ಸಿಯೇ ಪ್ರಮುಖ ಆಸರೆ

ಬಳಗಾನೂರು: ಪ್ರಾಥಮಿಕ ಆರೋಗ್ಯ ಕೇಂದ್ರವು ಗರ್ಭಿಣಿಯರು, ಬಾಣಂತಿಯರು, ನವಜಾತ ಶಿಶುಗಳು, ಮಕ್ಕಳು, ವೃದ್ಧರು ಸೇರಿದಂತೆ ವಿವಿಧ ವರ್ಗದ ಜನರಿಗೆ ಆರೋಗ್ಯ ಸೇವೆ ಒದಗಿಸುತ್ತಿದೆ. ತಾಯಿ ಮತ್ತು ಶಿಶು ಆರೋಗ್ಯ ರಕ್ಷಣೆ, ಲಸಿಕಾ ಕಾರ್ಯಕ್ರಮಗಳು, ವಿವಿಧ ರೋಗಗಳ ತಡೆಗಟ್ಟುವಿಕೆ, ಪ್ರಾಥಮಿಕ ಚಿಕಿತ್ಸೆ ಹಾಗೂ ಸಾರ್ವಜನಿಕ ಆರೋಗ್ಯ ಕಾರ್ಯಕ್ರಮಗಳಲ್ಲಿ ಈ ಕೇಂದ್ರ ಮಹತ್ವದ ಪಾತ್ರ ವಹಿಸುತ್ತಿದೆ.ಆದರೆ, ಗಂಭೀರ ಕಾಯಿಲೆಗಳು, ತುರ್ತು ಆರೋಗ್ಯ ಸಮಸ್ಯೆಗಳು ಹಾಗೂ ಹೆಚ್ಚಿನ ಮಟ್ಟದ ವೈದ್ಯಕೀಯ ಸೇವೆಗಳ ಅಗತ್ಯ ಎದುರಾದಾಗ ರೋಗಿಗಳು ಬೇರೆ ಆಸ್ಪತ್ರೆಗಳನ್ನು ಅವಲಂಬಿಸಬೇಕಾಗಬಹುದು. ಇಂತಹ ಸಂದರ್ಭದಲ್ಲಿ ದೂರದ ಪ್ರಯಾಣವು ರೋಗಿಗಳು ಮತ್ತು ಅವರ ಕುಟುಂಬಗಳಿಗೆ ಸಮಯ ಹಾಗೂ ಆರ್ಥಿಕ ಹೊರೆಯಾಗುವ ಸಾಧ್ಯತೆಯಿದೆ.

ಪಟ್ಟಣದ ಬೆಳವಣಿಗೆಗೆ ತಕ್ಕಂತೆ ಆರೋಗ್ಯ ವ್ಯವಸ್ಥೆಯೂ ಬೆಳೆಯಲಿ

ಬಳಗಾನೂರು ಪಟ್ಟಣ ಪಂಚಾಯತ್ ಆಗಿ ರೂಪುಗೊಂಡು ಎಂಟು ವರ್ಷಗಳು ಕಳೆದಿರುವ ಹಿನ್ನೆಲೆಯಲ್ಲಿ ಪಟ್ಟಣದ ಹಾಗೂ ಸುತ್ತಮುತ್ತಲಿನ ಗ್ರಾಮಗಳ ಆರೋಗ್ಯ ಸೇವೆಯ ಅಗತ್ಯಗಳನ್ನು ಮರುಪರಿಶೀಲಿಸುವುದು ಅವಶ್ಯಕವಾಗಿದೆ. ಸುಮಾರು 50 ವರ್ಷಗಳ ಸೇವಾ ಇತಿಹಾಸ ಹೊಂದಿರುವ ಆರೋಗ್ಯ ಕೇಂದ್ರವನ್ನು ಕಾಲಕ್ಕೆ ತಕ್ಕಂತೆ ಅಭಿವೃದ್ಧಿಪಡಿಸಿ, ಸಮುದಾಯ ಆರೋಗ್ಯ ಕೇಂದ್ರವನ್ನಾಗಿ ಮೇಲ್ದರ್ಜೆಗೇರಿಸಲು ಕ್ರಮ ಕೈಗೊಳ್ಳಬೇಕಿದೆ.ಬಳಗಾನೂರು ಪಟ್ಟಣದಲ್ಲಿ ಸಿಎಚ್‌ಸಿ ಸ್ಥಾಪನೆಗೆ ಅಗತ್ಯವಾಗಬಹುದಾದ ಸ್ಥಳ, ಕಟ್ಟಡ ಹಾಗೂ ಮೂಲಸೌಕರ್ಯಗಳು ಲಭ್ಯವಿವೆ ಎಂಬುದು ಸ್ಥಳೀಯರ ಅಭಿಪ್ರಾಯವಾಗಿದೆ. ಈ ಹಿನ್ನೆಲೆಯಲ್ಲಿ ಆರೋಗ್ಯ ಇಲಾಖೆಯ ಅಧಿಕಾರಿಗಳು ಸ್ಥಳ ಪರಿಶೀಲನೆ ನಡೆಸಿ, ಪ್ರಸ್ತುತ ಸೌಲಭ್ಯಗಳು, ಸಿಬ್ಬಂದಿ, ವೈದ್ಯಕೀಯ ಉಪಕರಣಗಳು ಹಾಗೂ ಸರ್ಕಾರದ ಮಾನದಂಡಗಳನ್ನು ಪರಿಶೀಲಿಸಿ ಸಮಗ್ರ ಪ್ರಸ್ತಾವನೆ ಸಿದ್ಧಪಡಿಸಬೇಕಿದೆ.

ಆರೋಗ್ಯ ಸೇವೆ ಜನರ ಹಕ್ಕು; ಅಭಿವೃದ್ಧಿಗೆ ಆದ್ಯತೆ ನೀಡಲಿ

ಸಮುದಾಯ ಆರೋಗ್ಯ ಕೇಂದ್ರವಾಗಿ ಮೇಲ್ದರ್ಜೆಗೇರಿಸಿದರೆ, ಸರ್ಕಾರದ ಅನುಮೋದನೆ, ಅಗತ್ಯ ಸಿಬ್ಬಂದಿ ಮತ್ತು ಸೌಲಭ್ಯಗಳ ಲಭ್ಯತೆಗೆ ಅನುಗುಣವಾಗಿ ಹೆಚ್ಚಿನ ವೈದ್ಯಕೀಯ ಸೇವೆಗಳು, ತಜ್ಞ ವೈದ್ಯರ ಚಿಕಿತ್ಸೆ, ಪ್ರಯೋಗಾಲಯ ಪರೀಕ್ಷೆಗಳು ಹಾಗೂ ತುರ್ತು ಚಿಕಿತ್ಸಾ ವ್ಯವಸ್ಥೆಯನ್ನು ಅಭಿವೃದ್ಧಿಪಡಿಸಲು ಅವಕಾಶ ದೊರೆಯಬಹುದು.ಇದರಿಂದ ಬಳಗಾನೂರು ಸೇರಿದಂತೆ ಸುತ್ತಮುತ್ತಲಿನ ಗ್ರಾಮಗಳ ಜನರಿಗೆ ಸಮೀಪದಲ್ಲೇ ಉತ್ತಮ ಆರೋಗ್ಯ ಸೇವೆ ದೊರೆಯಲು ಸಹಕಾರಿಯಾಗಬಹುದು. ವಿಶೇಷವಾಗಿ ಗರ್ಭಿಣಿಯರು, ಬಾಣಂತಿಯರು, ಮಕ್ಕಳು ಮತ್ತು ತುರ್ತು ಚಿಕಿತ್ಸೆ ಅಗತ್ಯವಿರುವ ರೋಗಿಗಳಿಗೆ ಅನುಕೂಲವಾಗುವ ನಿರೀಕ್ಷೆಯಿದೆ.ಐದು ದಶಕಗಳಿಂದ ಜನರ ಸೇವೆ ಸಲ್ಲಿಸುತ್ತಿರುವ ಬಳಗಾನೂರು ಪ್ರಾಥಮಿಕ ಆರೋಗ್ಯ ಕೇಂದ್ರದ ಅಭಿವೃದ್ಧಿ ಕೇವಲ ಒಂದು ಪಟ್ಟಣದ ಬೇಡಿಕೆಯಲ್ಲ; ಸುತ್ತಮುತ್ತಲಿನ ಗ್ರಾಮೀಣ ಜನರ ಆರೋಗ್ಯ ಭದ್ರತೆಗೆ ಸಂಬಂಧಿಸಿದ ಪ್ರಮುಖ ವಿಚಾರವಾಗಿದೆ. ಆದ್ದರಿಂದ ರಾಜ್ಯ ಸರ್ಕಾರ, ಆರೋಗ್ಯ ಇಲಾಖೆ, ಮಸ್ಕಿ ಕ್ಷೇತ್ರದ ಶಾಸಕರು ಹಾಗೂ ಸಂಬಂಧಪಟ್ಟ ಅಧಿಕಾರಿಗಳು ಈ ಬೇಡಿಕೆಯನ್ನು ಆದ್ಯತೆಯಿಂದ ಪರಿಗಣಿಸಿ, ಬಳಗಾನೂರು ಪಿಎಚ್‌ಸಿಯನ್ನು ಸಮುದಾಯ ಆರೋಗ್ಯ ಕೇಂದ್ರವಾಗಿ ಮೇಲ್ದರ್ಜೆಗೇರಿಸುವ ಪ್ರಕ್ರಿಯೆಗೆ ಚಾಲನೆ ನೀಡಬೇಕೆಂಬುದು ಸಾರ್ವಜನಿಕರ ಒತ್ತಾಯವಾಗಿದೆ.

ಶಾಸಕ ಬಸನಗೌಡ ತುರ್ವಿಹಾಳ ಅವರಲ್ಲಿ ಸಾರ್ವಜನಿಕರ ನಿರೀಕ್ಷೆ

ಮಸ್ಕಿ ವಿಧಾನಸಭಾ ಕ್ಷೇತ್ರದ ಶಾಸಕರಾದ ಶ್ರೀ ಆರ್. ಬಸನಗೌಡ ತುರ್ವಿಹಾಳ ಅವರು ಬಳಗಾನೂರು ಹಾಗೂ ಸುತ್ತಮುತ್ತಲಿನ 35 ಹಳ್ಳಿಗಳ ಜನರ ಆರೋಗ್ಯದ ಹಿತದೃಷ್ಟಿಯಿಂದ ಈ ವಿಷಯಕ್ಕೆ ವಿಶೇಷ ಗಮನ ಹರಿಸಬೇಕೆಂಬುದು ಸಾರ್ವಜನಿಕರ ನಿರೀಕ್ಷೆಯಾಗಿದೆ.ಶಾಸಕರು ಆರೋಗ್ಯ ಇಲಾಖೆಯ ಹಿರಿಯ ಅಧಿಕಾರಿಗಳೊಂದಿಗೆ ಚರ್ಚಿಸಿ, ಬಳಗಾನೂರು ಪ್ರಾಥಮಿಕ ಆರೋಗ್ಯ ಕೇಂದ್ರವನ್ನು ಸಮುದಾಯ ಆರೋಗ್ಯ ಕೇಂದ್ರವಾಗಿ ಮೇಲ್ದರ್ಜೆಗೇರಿಸಲು ಅಗತ್ಯವಾದ ಪ್ರಸ್ತಾವನೆಯನ್ನು ಸರ್ಕಾರಕ್ಕೆ ಸಲ್ಲಿಸುವುದು, ಸಂಬಂಧಪಟ್ಟ ಇಲಾಖೆಗಳ ಮೂಲಕ ಪರಿಶೀಲನೆ ನಡೆಸಿಸುವುದು ಹಾಗೂ ಅಗತ್ಯ ಅನುದಾನ ಮತ್ತು ಅನುಮೋದನೆ ಪಡೆಯಲು ಪ್ರಯತ್ನಿಸುವುದು ಮಹತ್ವದ ಹೆಜ್ಜೆಯಾಗಲಿದೆ.

"ಪ್ರತಿ ತಾಲೂಕಿನಲ್ಲಿ ಮೂರು ಪ್ರಾಥಮಿಕ ಆರೋಗ್ಯ ಕೇಂದ್ರಗಳನ್ನು ಮೇಲ್ದರ್ಜೆಗೇರಿಸಲು ಕ್ರಮ ಕೈಗೊಳ್ಳಲಾಗುತ್ತಿದೆ. ಬಳಗಾನೂರು ಪ್ರಾಥಮಿಕ ಆರೋಗ್ಯ ಕೇಂದ್ರವನ್ನು ಸಮುದಾಯ ಆರೋಗ್ಯ ಕೇಂದ್ರವಾಗಿ ಮೇಲ್ದರ್ಜೆಗೇರಿಸುವ ಬೇಡಿಕೆಯನ್ನು ಸಂಬಂಧಪಟ್ಟ ಅಧಿಕಾರಿಗಳು, ಶಾಸಕರು ಹಾಗೂ ಸಚಿವರ ಗಮನಕ್ಕೆ ತಂದು, ಅಗತ್ಯ ಕ್ರಮ ಕೈಗೊಳ್ಳಲಾಗುವುದು."

ಡಾ. ನಂದಿತಾ(ಡಿ ಹೆಚ್ ಓ ರಾಯಚೂರು)



"35 ಹಳ್ಳಿಗಳ ಜನರ ಆರೋಗ್ಯಕ್ಕೆ ಬಲ ತುಂಬಲು, ಬಳಗಾನೂರಿಗೆ ಸಮುದಾಯ ಆರೋಗ್ಯ ಕೇಂದ್ರದ ಅಗತ್ಯವಿದೆ. ಜನರ ಬಹುಕಾಲದ ನಿರೀಕ್ಷೆಗೆ ಸರ್ಕಾರ ಮತ್ತು ಜನಪ್ರತಿನಿಧಿಗಳು ಸ್ಪಂದಿಸಲಿ."

35 ಹಳ್ಳಿಗಳ ಜನರ ಆರೋಗ್ಯದ ಹೊಣೆ ಹೊತ್ತಿರುವ ಬಳಗಾನೂರು ಪ್ರಾಥಮಿಕ ಆರೋಗ್ಯ ಕೇಂದ್ರದಲ್ಲಿ ಕೇವಲ ಇಬ್ಬರು ವೈದ್ಯರು ಮಾತ್ರ ಕಾರ್ಯನಿರ್ವಹಿಸುತ್ತಿರುವುದು ಸಾಕಾಗುವುದಿಲ್ಲ.ಹೆಚ್ಚುತ್ತಿರುವ ಜನಸಂಖ್ಯೆ ಹಾಗೂ ಆರೋಗ್ಯ ಸೇವೆಯ ಅಗತ್ಯಕ್ಕೆ ಅನುಗುಣವಾಗಿ ಹೆಚ್ಚುವರಿ ವೈದ್ಯರು, ತಜ್ಞ ವೈದ್ಯರು ಮತ್ತು ಅಗತ್ಯ ಸಿಬ್ಬಂದಿಯನ್ನು ನೇಮಿಸುವುದು ಅನಿವಾರ್ಯವಾಗಿರುವುದರಿಂದ ಆಸ್ಪತ್ರೆಯನ್ನು ಮೇಲ್ದರ್ಜೆಗೇರಿಸಬೇಕು

ರಾಘವೇಂದ್ರ ಕುಲಕರ್ಣಿ
(ಬಳಗಾನೂರ ನವ ನಿರ್ಮಾಣ ವೇದಿಕೆ ಸಂಘದ ಅಧ್ಯಕ್ಷ)

"ನಮ್ಮ ಬಳಗಾನೂರು ಗ್ರಾಮದಲ್ಲಿ ಸರ್ಕಾರಿ ಆಸ್ಪತ್ರೆ ಆರಂಭವಾಗಿ ಸುಮಾರು 50 ವರ್ಷಗಳಾಗಿವೆ. ಹೆಚ್ಚುತ್ತಿರುವ ಜನಸಂಖ್ಯೆ ಹಾಗೂ ಜನರ ಆರೋಗ್ಯದ ಅಗತ್ಯಗಳನ್ನು ಗಮನದಲ್ಲಿಟ್ಟುಕೊಂಡು ಆಸ್ಪತ್ರೆಯನ್ನು ಸಮುದಾಯ ಆರೋಗ್ಯ ಕೇಂದ್ರವಾಗಿ (CHC) ಮೇಲ್ದರ್ಜೆಗೇರಿಸುವುದು ಅತ್ಯಂತ ಅವಶ್ಯಕವಾಗಿದೆ. ಈ ಕುರಿತು ಶಾಸಕರ ಗಮನಕ್ಕೆ ತಂದು, ಆಸ್ಪತ್ರೆಯ ಮೇಲ್ದರ್ಜೆಗಾಗಿ ಪ್ರಾಮಾಣಿಕ ಪ್ರಯತ್ನ ಮಾಡುತ್ತೇನೆ."

ಪಂಪನಗೌಡ ಜಾಲಿ
(ಕಾಂಗ್ರೆಸ್ ಮುಖಂಡರು, ಬಳಗಾನೂರು)

ಹಲವು ವರ್ಷಗಳಿಂದ ಬಳಗಾನೂರಿನಲ್ಲಿ ಕೇವಲ ಆರು ಹಾಸಿಗೆಗಳ ಆಸ್ಪತ್ರೆ ಕಾರ್ಯನಿರ್ವಹಿಸುತ್ತಿದ್ದು,..ಆಸ್ಪತ್ರೆಯನ್ನು 30 ಹಾಸಿಗೆಗಳ ಆಸ್ಪತ್ರೆಯನ್ನಾಗಿ ಮೇಲ್ದರ್ಜೆಗೇರಿಸಿದರೆ, ಬಳಗಾನೂರು ಪಟ್ಟಣ ಸೇರಿದಂತೆ ಸುತ್ತಮುತ್ತಲಿನ ಗ್ರಾಮಗಳ ಸುಮಾರು 45,000 ಜನರಿಗೆ ಗುಣಮಟ್ಟದ ಆರೋಗ್ಯ ಸೇವೆ ಒದಗಿಸಲು ಅನುಕೂಲವಾಗಲಿದೆ...

ರಾಜಶೇಖರ್ ಶಂಕರ ಬಂಡಿ
(ಬಿಜೆಪಿ ಮುಖಂಡರು)

ಈ ದಿನದ ವಿಶೇಷ

1)ಮಹಾ ನವಮಿ 2026ರ ಕೆಲವು ಪಂಚಾಂಗಗಳ ಪ್ರಕಾರ ಅಕ್ಟೋಬರ್ 19ರಂದು ಆಚರಿಸಲಾಗುತ್ತದೆ.

2) ಸುಬ್ರಹ್ಮಣ್ಯನ್ ಚಂದ್ರಶೇಖರ್ ಜನ್ಮ ದಿನ:
ಖ್ಯಾತ ಭಾರತೀಯ ಮೂಲದ ಖಗೋಳ ಭೌತವಿಜ್ಞಾನಿ, ನೊಬೆಲ್ ಪ್ರಶಸ್ತಿ ಪುರಸ್ಕೃತ

ಸುಭಾಷಿತ

ಸೋಮಾರಿಯಾದವನು ತನ್ನ ಹಿತವನ್ನು ನೋಡಿಕೊಳ್ಳಲಾರ; ಇತರರಿಗೂ ಸಹಾಯ ಮಾಡಲಾರ.

–ಗೌತಮ ಬುದ್ಧ

ಹಳ್ಳಿಕಾರ್ ತಳಿ ಜಾತಿಯ ಹೋರಿಗಳನ್ನು ಬೆಳೆಸಿ ಉಳಿಸಲು ಸರ್ಕಾರ ಪ್ರೋತ್ಸಾಹ ನೀಡಬೇಕು ರೈತ ಸಂಘದ ಮುಖಂಡ ಹೊಸಕೋಟೆ ಬಸವರಾಜು

ನೈಜ್ಯ ದೆಸೆ ನ್ಯೂಸ್

ತಾಂಡವಪುರ ಅಕ್ಟೋಬರ್ 18 ವಿಶ್ವವಿಖ್ಯಾತ ನಾಡಹಬ್ಬ ಮೈಸೂರು ದಸರಾ ಮಹೋತ್ಸವದ ಅಂಗವಾಗಿ ಸರ್ಕಾರ ಮತ್ತು ಜಿಲ್ಲಾಡಳಿತ ವಿವಿಧ ಕಾರ್ಯಕ್ರಮಗಳನ್ನು ಹಮ್ಮಿಕೊಂಡಿದ್ದು ದಸರಾ ಕಾರ್ಯಕ್ರಮದಲ್ಲಿ ಎಲ್ಲಾ ರೀತಿಯ ವೈವಿಧ್ಯಮಯ ರೀತಿಯಲ್ಲಿ ನಾಡ ಕುಸ್ತಿ ಯುವ ಸಂಭ್ರಮ ಯುವ ದಸರಾ ಸೇರಿದಂತೆ ನಮ್ಮ ನಾಡಿನ ಸಂಸ್ಕೃತಿ ಬಿಂಬಿಸುವಂತಹ ಆಟೋಟಗಳನ್ನು ಹಮ್ಮಿಕೊಂಡು ಜನರ ಗಮನ ಸೆಳೆಯುತ್ತಿರುವ ಸರಿ ಅಷ್ಟೇ ಆದರೆ ಬಹು ಮುಖ್ಯವಾದ ನಮ್ಮ ರಾಜ್ಯದ ಹೈನುಗಾರಿಕೆಯಲ್ಲಿ ಒಂದಾದ ರೈತರ ಜೀವನಾಡಿ ರೈತರ ಬೆನ್ನೆಲುಬು ಹಳ್ಳಿಕಾರ್ ತಳಿ ಜಾತಿಯ ಉಳಿಸಿ ಬೆಳೆಸಲು ಸರ್ಕಾರ ಪ್ರೋತ್ಸಾಹ ನೀಡಬೇಕು ಎಂದು ರಾಜ್ಯ ರೈತ ಸಂಘದ ಮುಖಂಡರಾದ ಹೊಸಕೋಟೆ



ಬಸವರಾಜ್ ರವರು ಒತ್ತಾಯಿಸಿದರು ಈ ದಸರಾ ಮಹೋತ್ಸವ ಕಾರ್ಯಕ್ರಮದಲ್ಲಿ ಹಳ್ಳಿಕಾರ್ ಜಾತಿಯ ಪ್ರದರ್ಶನ ಮಾಡಲು ಇದೇ ಮೊದಲ ಬಾರಿಗೆ ನಮ್ಮ ಬೇಡಿಕೆಗ ಸರ್ಕಾರ ಮತ್ತು ಜಿಲ್ಲಾಡಳಿತ ಸ್ಪಂದಿಸಿ ನಮ್ಮ ನಾಡಿನ ಹಳ್ಳಿಕಾರ್ ಜಾತಿಯ ರಾಸುಗಳನ್ನು ಬೆಳೆಸಿ ಉಳಿಸಲು ಹೆಚ್ಚು ಹೆಚ್ಚು ಪ್ರೋತ್ಸಾಹ ನೀಡಬೇಕೆಂದು ಒತ್ತಾಯ ಮಾಡಿದ್ದಾರೆ ಅಲ್ಲದೆ ನಮ್ಮ ಬೇಡಿಕೆಗೆ ಸ್ಪಂದಿಸಿದ ಸರ್ಕಾರಕ್ಕೆ ಮತ್ತು ಜಿಲ್ಲಾಡಳಿತಕ್ಕೆ ನಾವು ರೈತರ ಪರವಾಗಿ ಅಭಿನಂದನೆ ಸರಸುತ್ತೇವೆ ಈ ಬಾರಿ ಸುಮಾರು ಮೈಸೂರು ಜಿಲ್ಲೆ, ಮಂಡ್ಯ ಚಾಮರಾಜನಗರ ಸೇರಿದಂತೆ ಇನ್ನು ಅನೇಕ ಜಿಲ್ಲೆಗಳಿಂದ ಹಳ್ಳಿಕಾರ್ ಜಾತಿಯ ಓರಿಯನ್ನು ಸಾಕುವ ರೈತರು ಈ ವಸ್ತು ಪ್ರದರ್ಶನ ಕಾರ್ಯಕ್ರಮದಲ್ಲಿ ಭಾಗಿಯಾಗಿದ್ದಾರೆ ಇದೇ ಮೊದಲ ಬಾರಿಗೆ ಈ ಕಾರ್ಯಕ್ರಮ ಹಮ್ಮಿಕೊಂಡಿರುವುದರಿಂದ ಸ್ವಲ್ಪ ಗೊಂದಲ ಉಂಟಾಗಿದ್ದು ಮುಂದಿನ ವರ್ಷದಿಂದ ಸರ್ಕಾರ ಮತ್ತು ಜಿಲ್ಲಾಡಳಿತ ಬಹಳ ಅಚ್ಚುಕಟ್ಟಾಗಿ ಈ ಒಂದು ಹಳ್ಳಿಕಾರ್ ಜಾತಿಯ ತಳಿಯನ್ನು ಬೆಳೆಸಿ ಉಳಿಸಲು ಪ್ರೋತ್ಸಾಹ ನೀಡಬೇಕೆಂದು ಹೇಳಿದರು ಈ ವಸ್ತು ಪ್ರದರ್ಶನ ಕಾರ್ಯಕ್ರಮಕ್ಕೆ ನಂಜನಗೂಡು ತಾಲೂಕು ಚಿಕ್ಕಯ್ಯನ ಛತ್ರ ಹೋಬಳಿ ವರುಣ ವಿಧಾನಸಭಾ ಕ್ಷೇತ್ರಕ್ಕೆ ಸೇರುವ ಹಿಮ್ಮವು ಗ್ರಾಮದ ಪ್ರಮೋದ್ ಮಹೇಂದ್ರ ರವರ ಹಳ್ಳಿ ಕರ್ ಜಾತಿ ಹೋರಿ ರೈತರ ಗಮನ ಸೆಳೆದವು ಈ ಸಂದರ್ಭದಲ್ಲಿ ರೈತ ಸಂಘದ ಮುಖಂಡ ಹೊಸಕೋಟೆ ಬಸವರಾಜು ಹಾಗೂ ಇಮ್ಮಾವು ಗ್ರಾಮದ ರೈತರು ಈ ಒಂದು ಕಾರ್ಯಕ್ರಮದಲ್ಲಿ ಭಾಗಿಯಾಗಿದ್ದರು

ಸಾಹಿತ್ಯ ಸಿಂಚನ

ಕಳೆದುಹೋದ ನಗುವಿನ ಹುಡುಕಾಟ

ಕನ್ನಡಿ ಮುಂದೆ ನಿಂತಾಗ ಇಂದು,
ಮುಖವಿದೆ ಆದರೆ ನಗು ಕಾಣದು,
ಕಣ್ಣಿನಲ್ಲಿ ಸಾವಿರ ಮಾತಿದ್ದರೂ,
ಮನದ ನೋವು ಮಾತ್ರ ಹೊರಬರದು.

ಒಮ್ಮೆ ಸಣ್ಣ ಕ್ಷಣವೂ ಸಾಕಾಗಿತ್ತು,
ತುಟಿಗಳ ಮೇಲೆ ನಗು ಮೂಡಿಸಲು,
ಇಂದು ಸಾವಿರ ಕಾರಣಗಳಿದ್ದರೂ,
ಮನಸ್ಸು ಸಿದ್ಧವಿಲ್ಲ ನಗಲು.

ಹಳೆಯ ದಿನಗಳ ದಾರಿಯಲ್ಲಿ ನಡೆದು,
ಮರೆತ ಸಂತೋಷವ ಹುಡುಕುತ್ತೇನೆ,
ಬಾಲ್ಯದ ಆ ಮುಗ್ಧ ನಗುವನ್ನು,
ನೆನಪುಗಳ ನಡುವೆ ಕರೆಯುತ್ತೇನೆ.

ಕಳೆದುಹೋದ ಕ್ಷಣಗಳು ಹೇಳುತ್ತವೆ,
"ನಿನ್ನ ನಗು ಇನ್ನೂ ನಿನ್ನೊಳಗಿದೆ,"
ಮನದ ಬಾಗಿಲು ತೆರೆದು ನೋಡಿದರೆ,
ಅದು ಮೌನದ ಹಿಂದೆ ಅಡಗಿದೆ.

ಕಣ್ಣೀರಿನ ಹನಿಗಳ ನಡುವೆ ಕೂಡ,
ಒಂದು ಪುಟ್ಟ ಭರವಸೆ ಉಳಿದಿದೆ,
ಕತ್ತಲಾದ ಈ ಬದುಕಿನ ದಾರಿಯಲ್ಲಿ,
ಹೊಸ ನಗುವಿನ ಬೆಳಕು ಕಾದಿದೆ.

ನಿನ್ನೆ ಕಳೆದುಕೊಂಡ ನಗುವಿಗಾಗಿ,
ಇಂದು ಹುಡುಕಾಟ ಮುಂದುವರಿಯಲಿ,
ನಾಳೆಯ ಹೊಸ ಪ್ರಭಾತದೊಂದಿಗೆ,
ನನ್ನ ನಗು ಮತ್ತೆ ಅರಳಲಿ.

ಅಂಗದಹಳ್ಳಿ ಶ್ರೀ ಪರಮಾನಂದ ದೇವಸ್ಥಾನದಲ್ಲಿ ಅ. 29 ಮತ್ತು 30ರಂದು ಇಷ್ಟಲಿಂಗ ಮಹಾಪೂಜೆ ಹಾಗೂ ಧಾರ್ಮಿಕ ಕಾರ್ಯಕ್ರಮ ಕಾಶಿ ಜಗದ್ಗುರುಗಳ ದಿವ್ಯ ಸಾನ್ನಿಧ್ಯದಲ್ಲಿ ವಿವಿಧ ಧಾರ್ಮಿಕ ಕೈಂಕರ್ಯಗಳು; ಭಕ್ತಾದಿಗಳ ಪಾಲ್ಗೊಳ್ಳುವಿಕೆಗೆ ಟ್ರಸ್ಟ್ ಮನವಿ

❑ ನೈಜ್ಯ ದೆಸೆ ನ್ಯೂಸ್

ದೇವದುರ್ಗ, ಅ. 18:** ರಾಯಚೂರು ಜಿಲ್ಲೆಯ ದೇವದುರ್ಗ ತಾಲೂಕಿನ ಅಂಗದಹಳ್ಳಿ ಗ್ರಾಮದ ಐತಿಹಾಸಿಕ ಶ್ರೀ ಪರಮಾನಂದ ದೇವಸ್ಥಾನದಲ್ಲಿ ಶ್ರೀ ಪರಮಾನಂದ ದೇವಸ್ಥಾನ ಜನಕಲ್ಯಾಣ ಟ್ರಸ್ಟ್ ಹಾಗೂ ಗ್ರಾಮದ ಸಮಸ್ತ ಭಕ್ತಾದಿಗಳ ಸಹಯೋಗದಲ್ಲಿ ಅಕ್ಟೋಬರ್ 29 ಮತ್ತು 30ರಂದು ವಿವಿಧ ಧಾರ್ಮಿಕ ಹಾಗೂ ಸತ್ಸಂಗ ಕಾರ್ಯಕ್ರಮಗಳನ್ನು ವಿಜೃಂಭಣೆಯಿಂದ ಆಯೋಜಿಸಲಾಗಿದೆ.ಅ. 29ರಂದು ಅಯ್ಯಾಚಾರ, ಶಿವದೀಕ್ಷೆ ಹಾಗೂ ಭವ್ಯ ಮೆರವಣಿಗೆ ಅಕ್ಟೋಬರ್ 29ರ ಗುರುವಾರ ಬೆಳಿಗ್ಗೆ 8 ಗಂಟೆಗೆ ಅಯ್ಯಾಚಾರ ಹಾಗೂ ಶಿವದೀಕ್ಷೆ ಕಾರ್ಯಕ್ರಮ ಜರುಗಲಿದೆ. ಅದೇ ದಿನ ಸಂಜೆ 4 ಗಂಟೆಗೆ ಸುಮಂಗಲೆಯ–ರಿಂದ ಕುಂಭ–ಕಳಸದೊಂದಿಗೆ ಭವ್ಯ ಮೆರವಣಿಗೆ ಹಾಗೂ ಉತ್ಸವ ನಡೆಯಲಿದೆ.ಅ. 30ರಂದು ಇಷ್ಟಲಿಂಗ ಮಹಾಪೂಜೆ ಅಕ್ಟೋಬರ್ 30ರ ಶುಕ್ರವಾರ ಬೆಳಿಗ್ಗೆ 8 ಗಂಟೆಗೆ ಇಷ್ಟಲಿಂಗ



ಮಹಾಪೂಜೆ ಹಾಗೂ ವಿವಿಧ ವಿಶೇಷ ಪೂಜಾ ಕೈಂಕರ್ಯಗಳು ನೆರವೇರಲಿವೆ. ಎರಡು ದಿನಗಳ ಕಾಲ ನಡೆಯಲಿರುವ ಧಾರ್ಮಿಕ ಕಾರ್ಯಕ್ರಮಗಳಲ್ಲಿ ಭಕ್ತಿಭಾವದೊಂದಿಗೆ ಭಕ್ತಾದಿಗಳು ಪಾಲ್ಗೊಳ್ಳುವ ನಿರೀಕ್ಷೆಯಿದೆ.ಕಾಶಿ ಜಗದ್ಗುರುಗಳ ದಿವ್ಯ ಸಾನ್ನಿಧ್ಯಕಾರ್ಯಕ್ರಮಕ್ಕೆ ಶ್ರೀ ಶ್ರೀ ಶ್ರೀ 1008 ಶ್ರೀಮದ್ ಜ್ಞಾನಸಿಂಹಾಸನಾಧೀಶ್ವರ ಕಾಶಿ ಜಗದ್ಗುರು ಧರ್ಮರತ್ನ ಡಾ. ಮಲ್ಲಿಕಾರ್ಜುನ ವಿಶ್ವರಾಧ್ಯ ಶಿವಾಚಾರ್ಯ ಮಹಾಭಗವತ್ಪಾದಂಗಳವರು ದಿವ್ಯ ಸಾನ್ನಿಧ್ಯ ವಹಿಸಲಿದ್ದಾರೆ. ಜಾಲಹಳ್ಳಿಯ ಬೃಹನ್ಮಠದ ಶ್ರೀ ಷಣ್ಮುಖ ಬಾಳಯ್ಯ ಜಗದಾರಾಧ್ಯ ಜಯಶಾಂತಲಿಂಗೇಶ್ವರ ಶಿವಾಚಾರ್ಯರು ಹಾಗೂ ದೇವಾಪುರದ ಸಂಸ್ಥಾನಮಠದ ಶ್ರೀ ಶಿವಮೂರ್ತಿ ಶಿವಾಚಾರ್ಯರು ಉಪಸ್ಥಿತರಿರಲಿದ್ದಾರೆ.ಇದೇ ಸಂದರ್ಭದಲ್ಲಿ ದೇವಾಪುರದ ಸಂಸ್ಥಾನಮಠದ ಶ್ರೀ ಶಿವಮೂರ್ತಿ ಶಿವಾಚಾರ್ಯರಿಂದ ಅಕ್ಟೋಬರ್ 11ರಿಂದ ಮೌನ ಅನುಷ್ಠಾನವೂ ನಡೆಯುತ್ತಿದೆ ಎಂದು ತಿಳಿಸಲಾಗಿದೆ.ಭಕ್ತಾದಿಗಳಿಗೆ ಟ್ರಸ್ಟ್ ಮನವಿಅಂಗದಹಳ್ಳಿ ಶ್ರೀ ಪರಮಾನಂದ ದೇವಸ್ಥಾನದ ಧಾರ್ಮಿಕ ಪರಂಪರೆಯನ್ನು ಮುಂದುವರಿಸುವ ನಿಟ್ಟಿನಲ್ಲಿ ಆಯೋಜಿಸಿರುವ ಈ ಕಾರ್ಯಕ್ರಮಗಳಲ್ಲಿ ಸುತ್ತಮುತ್ತಲಿನ ಗ್ರಾಮಗಳ ಭಕ್ತಾದಿಗಳು ಸೇರಿದಂತೆ ಸಮಸ್ತ ಶಿವಭಕ್ತರು ಹೆಚ್ಚಿನ ಸಂಖ್ಯೆಯಲ್ಲಿ ಪಾಲ್ಗೊಂಡು ಶ್ರೀಗಳ ಆಶೀರ್ವಾದ ಹಾಗೂ ಕೃಪೆಗೆ ಪಾತ್ರರಾಗಬೇಕೆಂದು ಶ್ರೀ ಪರಮಾನಂದ ದೇವಸ್ಥಾನ ಜನಕಲ್ಯಾಣ ಟ್ರಸ್ಟ್‌ನ ಅಧ್ಯಕ್ಷರಾದ ಶ್ರೀ ಮಹಾಂತಯ್ಯ ಸ್ವಾಮಿ ಹಾಗೂ ಸಮಸ್ತ ಭಕ್ತಾದಿಗಳು ಮನವಿ ಮಾಡಿದ್ದಾರೆ. ವರದಿ: ಖಾಜಾ ಹುಸೇನ್ ಬಾಬಾ, ಜಾಲಹಳ್ಳಿ

ದೇವದುರ್ಗದಲ್ಲಿ ಪಡಿತರ ಅಕ್ಕಿ ಅಕ್ರಮ ಸಾಗಾಟ ಪತ್ತೆ:–4.22 ಲಕ್ಷ ಮೌಲ್ಯದ ಅಕ್ಕಿ, ವಾಹನ ವಶ ಇಬ್ಬರ ವಿರುದ್ಧ ಎಫ್‌ಐಆರ್ ದಾಖಲು; ಅಗತ್ಯ ವಸ್ತುಗಳ ಕಾಯ್ದೆಯಡಿ ಪ್ರಕರಣ

❑ ನೈಜ್ಯ ದೆಸೆ ನ್ಯೂಸ್

ದೇವದುರ್ಗ, ಅ.18: ರಾಯಚೂರು ಜಿಲ್ಲೆಯ ದೇವದುರ್ಗ ಪಟ್ಟಣದ ವಾಲ್ಮೀಕಿ ವೃತ್ತದ ಬಳಿ ಸಾರ್ವಜನಿಕ ವಿತರಣಾ ವ್ಯವಸ್ಥೆಯ (ಪಿಡಿಎಸ್) ಅಡಿಯಲ್ಲಿ ಬಡವರಿಗೆ ವಿತ–ರಿಸಬೇಕಾದ ಪಡಿತರ ಅಕ್ಕಿಯನ್ನು ಅಕ್ರಮವಾಗಿ ಸಾಗಿಸುತ್ತಿದ್ದ ವಾಹನವನ್ನು ಆಹಾರ ಇಲಾಖೆ ಹಾಗೂ ಸಂಬಂಧಪಟ್ಟ ಅಧಿಕಾರಿಗಳು ಜಂಟಿ ಕಾರ್ಯಾಚರಣೆ ನಡೆಸಿ ವಶಪಡಿಸಿಕೊಂಡಿದ್ದಾರೆ. ಈ ಪ್ರಕರಣಕ್ಕೆ ಸಂಬಂಧಿಸಿದಂತೆ ಇಬ್ಬರ ವಿರುದ್ಧ ದೇವದುರ್ಗ ಪೊಲೀಸ್ ಠಾಣೆಯಲ್ಲಿ ಎಫ್‌ಐಆರ್ ದಾಖಲಾಗಿದೆ.ಅ.16ರಂದು ಬೆಳಗಿನ ಜಾವ ಸುಮಾರು 2 ಗಂಟೆಗೆ ದೇವದುರ್ಗ– ರಾಯಚೂರು ಮುಖ್ಯ ರಸ್ತೆಯ ವಾಲ್ಮೀಕಿ ವೃತ್ತದ ಬಳಿ ಈ ಕಾರ್ಯಾಚರಣೆ ನಡೆದಿದೆ. ದೇವದುರ್ಗದ



ಆಹಾರ ನಿರೀಕ್ಷಕ ಖಲೀಲ್ ಅಹ್ಮದ್ ನೀಡಿದ ದೂರಿನ ಆಧಾರದ ಮೇಲೆ ಪ್ರಕರಣ ದಾಖಲಿಸಲಾಗಿದೆ.86 ಗೋಣಿ ಚೀಲಗಳಲ್ಲಿ ಅಕ್ಕಿ ಪತ್ತೆ ಸರ್ಕಾರದ ವಿವಿಧ ಯೋಜನೆಗಳಡಿ ಬಡವರಿಗೆ ಉಚಿತವಾಗಿ ವಿತರಿಸಬೇಕಾದ ಪಡಿತರ ಅಕ್ಕಿಯನ್ನು ಅಕ್ರಮವಾಗಿ ಹೆಚ್ಚಿನ ಬೆಲೆಗೆ ಮಾರಾಟ ಮಾಡುವ ಉದ್ದೇಶದಿಂದ ಸಂಗ್ರಹಿಸಿ ಸಾಗಿಸಲಾಗುತ್ತಿದೆ ಎಂಬ ಖಚಿತ ಮಾಹಿತಿ ಮೇರೆಗೆ ಅಧಿಕಾರಿಗಳು ದಾಳಿ ನಡೆಸಿದ್ದಾರೆ. ಈ ವೇಳೆ ಎಂ–34–ಃ–7723 ನೋಂದಣಿ ಸಂಖ್ಯೆಯ ಅಶೋಕ್ ಲೇಲ್ಯಾಂಡ್ ಮಿನಿ ಗೂಡ್ಸ್ ವಾಹನದಲ್ಲಿ 86 ಗೋಣಿ ಚೀಲಗಳಲ್ಲಿ ತುಂಬಿದ್ದ ಒಟ್ಟು 4,365 ಕೆ.ಜಿ. ಪಡಿತರ ಅಕ್ಕಿ ಪತ್ತೆಯಾಗಿದೆ. ಅಕ್ಕಿಗೆ ಸಂಬಂಧಿಸಿದಂತೆ ಯಾವುದೇ ಅಧಿಕೃತ ಬಿಲ್ ಅಥವಾ ಪರವಾನಗಿ ದಾಖಲೆಗಳು ಇರಲಿಲ್ಲ ಎಂದು ದೂರಿನಲ್ಲಿ ತಿಳಿಸಲಾಗಿದೆ.4.22 ಲಕ್ಷ ಮೌಲ್ಯದ ಸ್ವತ್ತು ವಶ ಪ್ರಕರಣಕ್ಕೆ ಸಂಬಂಧಿಸಿದಂತೆ ಮಸ್ಕಿ ತಾಲೂಕಿನ ಬಾಲನಗರದ ವೀರೇಶ್ (25) ಹಾಗೂ ಮಹೇಶ್ (18) ಎಂಬುವವರ ವಿರುದ್ಧ ಆರೋಪ ಮಾಡಲಾಗಿದೆ. ಅಧಿಕಾರಿಗಳು 1,22,220 ರೂ. ಅಂದಾಜು ಮೌಲ್ಯದ 4,365 ಕೆ.ಜಿ. ಅಕ್ಕಿ ಹಾಗೂ 3 ಲಕ್ಷ ರೂ. ಮೌಲ್ಯದ ಮಿನಿ ಗೂಡ್ಸ್ ವಾಹನವನ್ನು ವಶಪಡಿಸಿಕೊಂಡಿದ್ದಾರೆ. ವಶಪಡಿಸಿಕೊಂಡ ಸ್ವತ್ತುಗಳ ಒಟ್ಟು ಅಂ–ದಾಜು ಮೌಲ್ಯ 4,22,220 ರೂ. ಆಗಿದೆ. ಮುಂದುವರಿದ ತನಿಖೆ ಈ ಸಂಬಂಧ ಅಗತ್ಯ ವಸ್ತುಗಳ ಕಾಯ್ದೆ1955ರ ಕಲಂ 3 ಮತ್ತು 7ರ ಅಡಿಯಲ್ಲಿ ದೇವದುರ್ಗ ಪೊಲೀಸ್ ಠಾಣೆಯಲ್ಲಿ ಪ್ರಕರಣ ಸಂಖ್ಯೆ 335/2026 ದಾಖಲಾಗಿದ್ದು, ಪೊಲೀಸರು ಮುಂದಿನ ತನಿಖೆ ಕೈಗೊಂಡಿದ್ದಾರೆ. ವರದಿ: ಖಾಜಾ ಹುಸೇನ್ ಬಾಬಾ, ಜಾಲಹಳ್ಳಿ**

ಕುಷ್ಟಗಿಯಲ್ಲಿ ಮಾಜಿ ಸಚಿವ ಮುರುಗೇಶ ನಿರಾಣಿಗೆ ಭವ್ಯ ಸ್ವಾಗತ

❑ ನೈಜ್ಯ ದೆಸೆ ನ್ಯೂಸ್



ಕುಷ್ಟಗಿ: ಬೃಹತ್ ಮತ್ತು ಮಧ್ಯಮ ಕೈಗಾರಿಕೆಗಳ ಮಾಜಿ ಸಚಿವ ಮುರುಗೇಶ್ ನಿರಾಣಿ ಅವರು ವೀರಶೈವ ಮಹಾಸಭಾದ ರಾಜ್ಯ ಉಪಾಧ್ಯಕ್ಷರಾಗಿ ಆಯ್ಕೆಯಾದ ಬಳಿಕ ಮೊದಲ ಬಾರಿಗೆ ಕೊಪ್ಪಳ ಜಿಲ್ಲಾ ಪ್ರತಿಭಾ ಪುರಸ್ಕಾರ ಕಾರ್ಯಕ್ರಮದ ಉದ್ಘಾಟನೆಗೆ ಆಗಮಿಸಿದ ಸಂದರ್ಭದಲ್ಲಿ ಕುಷ್ಟಗಿ ತಾಲೂಕು ಪಂಚಮಸಾಲಿಸಮಾಜದ ಅಭಿಮಾನಿಗಳ ತಂಡದ ವತಿಯಿಂದ ಅದ್ದೂರಿಯಾಗಿ ಸ್ವಾಗತಿಸಲಾಯಿತು.ಪಂಚಮಸಾಲಿ ಸಮಾಜದ ರಾಜ್ಯ ಪ್ರಧಾನ ಕಾರ್ಯದರ್ಶಿ ಶೇಖರಪ್ಪ ಮುತ್ತೇನವರ ಅವರ ನೇತೃತ್ವದಲ್ಲಿ ಕುಷ್ಟಗಿ ತಾಲೂಕಿನ ಸಮಾಜದ ಯುವಕರು ಬೈಕ್ ರ್ಯಾಲಿ ಮೂಲಕ ಮುರುಗೇಶ್ ನಿರಾಣಿ ಅವರನ್ನು ಸ್ವಾಗತಿಸಿದರು. ಬಳಿಕ ಪಟ್ಟಣದ ಮಲ್ಲಯ್ಯ ವೃತ್ತದಲ್ಲಿ ಸಮಾಜದ ಯುವಕರು ಒಗ್ಗೂಡಿ ಅವರಿಗೆ ಸನ್ಮಾನಿಸಿ ಗೌರವ ಸಲ್ಲಿಸಿದರು.ಈ ಸಂದರ್ಭದಲ್ಲಿ ಪಂಚಮಸಾಲಿ ಸಮಾಜದ ರಾಜ್ಯ ಪ್ರಧಾನ ಕಾರ್ಯದರ್ಶಿ ಶೇಖರಪ್ಪ ಮುತ್ತೇನವರ, ಸುರೇಶ ಹಳೇಗೌಡರ, ಮಹಾಂತಪ್ಪ ಮುದೇನೂರು, ಸತೀಶ ಬ್ಯಾಳಿ, ಚಂದ್ರು ಪಾಟೀಲ, ಅಮರೇಶ ಮಂಗಳೂರು, ಶಶಿಕುಮಾರ ಕಾಮನೂರ, ಪ್ರಕಾಶ ಪುರದ, ಚಂದ್ರು ಮಂಗಳೂರು, ಪ್ರಕಾಶ ನಾಯಕವಾಡಿ, ವೀರೇಶ ಸಣ್ಣಾಪುರ, ಚಂದ್ರು ಹವಾಲ್ದಾರ, ಪ್ರಭು ಜಾಗೀರದಾರ ಸೇರಿದಂತೆ ಪಂಚಮಸಾಲಿ ಸಮಾಜದ ಯುವಕರು ಹಾಗೂ ಅಭಿಮಾನಿಗಳು ಉಪಸ್ಥಿತರಿದ್ದರು.

ಜಾಲಹಳ್ಳಿ ಗ್ರಾ.ಪಂ. ಮೀಸಲಾತಿ ವಿವಾದ: ಮನವಿಗೆ ಜಿಲ್ಲಾಡಳಿತದ ಹಿಂಬರಹ

❑ ನೈಜ್ಯ ದೆಸೆ ನ್ಯೂಸ್

ದೇವದುರ್ಗ, ಅ.18: ರಾಯಚೂರು ಜಿಲ್ಲೆಯ ದೇವದುರ್ಗ ತಾಲೂಕಿನ ಜಾಲಹಳ್ಳಿ ಗ್ರಾಮ ಪಂಚಾಯಿತಿಯಲ್ಲಿ ಪ್ರವರ್ಗ2ಬಿ (ಮುಸ್ಲಿಂ) ಸಮುದಾಯಕ್ಕೆ ಸೂಕ್ತ ಮೀಸಲಾತಿ ಕಲ್ಪಿಸುವಂತೆ ಕೋರಿ ಸಲ್ಲಿಸಿದ್ದ ಮರುಪರಿಶೀಲನಾ ಮನವಿಗೆ ಜಿಲ್ಲಾಡಳಿತದಿಂದ ಹಿಂಬರಹ (ಇಟಿಜಂಢಿಜ–ಟಜಟಿಣ) ಬಂದಿದೆ. ಮೀಸಲಾತಿ ಬದಲಾವಣೆಗೆ ಅವಕಾಶವಿಲ್ಲದ ಕಾರಣ ಸಕ್ಷಮ ಪ್ರಾಧಿಕಾರಕ್ಕೆ ಮೇಲ್ಮನವಿ ಸಲ್ಲಿಸಿ ಪರಿಹಾರ ಕಂಡುಕೊಳ್ಳುವಂತೆ ಅಪರ ಜಿಲ್ಲಾಧಿಕಾರಿಗಳು ಸೂಚಿಸಿದ್ದಾರೆ.ಏನಿತ್ತು ಮನವಿಯಲ್ಲಿ?ಜಾಲಹಳ್ಳಿ ಗ್ರಾಮ ಪಂಚಾಯಿತಿಯು ಒಟ್ಟು 9 ವಾರ್ಡ್‌ಗಳನ್ನು ಹೊಂದಿದ್ದು, ವಾರ್ಡ್ ಸಂಖ್ಯೆ 2, 3, 4 ಹಾಗೂ 5ರಲ್ಲಿ ಪ್ರವರ್ಗ2ಬಿ (ಮುಸ್ಲಿಂ) ಸಮುದಾಯದ ಮತದಾರರು ಗಣನೀಯ ಸಂಖ್ಯೆಯಲ್ಲಿದ್ದಾರೆ. ಆದರೂ



ಪ್ರಕಟಗೊಂಡಿರುವ ಗ್ರಾಮ ಪಂಚಾಯಿತಿ ವಾರ್ಡ್ ಮೀಸಲಾತಿ ಪಟ್ಟಿಯಲ್ಲಿ ಈ ಸಮುದಾಯಕ್ಕೆ ಸೂಕ್ತ ಪ್ರಾತಿನಿಧ್ಯ ಕಲ್ಪಿಸಲಾಗಿಲ್ಲ ಎಂಬುದು ಅರ್ಜಿದಾರ ಹುಸೇನ್ ಸಾಬ್ ಜಾಲಹಳ್ಳಿ ಅವರ ವಾದವಾಗಿ–ತ್ತು.ಸಂಬಂಧಿತ ನಿಯಮಗಳು, ಮೀಸಲಾತಿ ಮಾರ್ಗಸೂಚಿಗಳು ಹಾಗೂ ವಾರ್ಡ್‌ವಾರು ಜನಸಂಖ್ಯೆ ಮತ್ತು ಮತದಾರರ ವಿವರಗಳನ್ನು ಪರಿಗಣಿಸಿ, ಅರ್ಹ ವಾರ್ಡ್‌ಗೆ ಪ್ರವರ್ಗ2ಬಿ ಮೀಸಲಾತಿಯನ್ನು ಮರುನಿಗದಿಪಡಿಸಬೇಕು. ಅಲ್ಪಸಂಖ್ಯಾತ ಸಮುದಾಯಕ್ಕೆ ಕಾನೂನುಬದ್ಧ ಹಾಗೂ ನ್ಯಾಯಯುತ ಪ್ರಾತಿನಿಧ್ಯ ದೊರೆಯುವಂತೆ ಕ್ರಮ ಕೈಗೊಳ್ಳಬೇಕು ಎಂದು ಅವರು 17–08–2026ರಂದು ಜಿಲ್ಲಾಡಳಿತಕ್ಕೆ ಮನವಿ ಸಲ್ಲಿಸಿದ್ದರು.ಜಿಲ್ಲಾಡಳಿತದ ಉತ್ತರವೇನು?ಮನವಿಗೆ ನೀಡಿರುವ ಹಿಂಬರಹದಲ್ಲಿ, 2026ನೇ ಸಾಲಿನ ಗ್ರಾಮ ಪಂಚಾಯಿತಿ ಚುನಾವಣೆಯ ಮೀಸಲಾತಿಯನ್ನು *ಕರ್ನಾಟಕ ಪಂಚಾಯತ್ ರಾಜ್ (ಗ್ರಾಮ ಪಂಚಾಯಿತಿಗಳಲ್ಲಿನ ಸ್ಥಾನಗಳನ್ನು ಆವರ್ತನೆಯ ಮೇಲೆ ಮೀಸಲಿಡುವ) ನಿಯಮಗಳು, 1998*ರ ಅನ್ವಯ ನಿಗದಿಪಡಿಸಲಾಗುತ್ತಿದೆ ಎಂದು ತಿಳಿಸಲಾಗಿದೆ.ಅರ್ಜಿದಾರರು ಕೋ–ರಿರುವಂತೆ ಮೀಸಲಾತಿಯನ್ನು ಬದಲಾಯಿಸಲು ಅವಕಾಶವಿಲ್ಲದ ಕಾರಣ, ಸಕ್ಷಮ ಪ್ರಾಧಿಕಾರಕ್ಕೆ ಮೇಲ್ಮನವಿ ಸಲ್ಲಿಸಿ ಪರಿಹಾರ ಕಂಡುಕೊಳ್ಳಬಹುದು ಎಂದು ಅಪರ ಜಿಲ್ಲಾಧಿಕಾ–ರಿಗಳು ಸ್ಪಷ್ಟಪಡಿಸಿದ್ದಾರೆ. ಅಲ್ಲದೆ, ಅರ್ಜಿಯನ್ನು ಇದೇ ಹಂತದಲ್ಲಿ ಮುಕ್ತಾಯಗೊಳಿಸಿರುವುದಾಗಿ ಹಿಂಬರಹದಲ್ಲಿ ಉಲ್ಲೇಖಿಸಲಾಗಿದೆ. ಮುಂದಿನ ನಡೆ ಏನು?ಜಿಲ್ಲಾಡಳಿತದ ಉತ್ತರದಿಂದ ಅಸಮಾಧಾನಗೊಂಡಿರುವ ಅರ್ಜಿದಾರರು, ಮೀಸಲಾತಿ ವಿಚಾರದಲ್ಲಿ ನ್ಯಾಯ ದೊರಕಿಸಿಕೊಳ್ಳಲು ಮುಂದಿನ ಕಾನೂನು ಕ್ರಮ ಕೈಗೊಳ್ಳುವ ಅವಕಾಶ ಹೊಂದಿದ್ದಾರೆ. ಆದರೆ, ಮೇಲ್ಮನವಿ ಸಲ್ಲಿಕೆ ಹಾಗೂ ಅದರ ವಿಚಾರಣೆ ಸಂಬಂಧಿಸಿದಂತೆ ಸೂಕ್ತ ಸಕ್ಷಮ ಪ್ರಾಧಿಕಾರವನ್ನು ಸಂಪರ್ಕಿಸುವುದು ಅಗತ್ಯವಾಗಿದೆ.ವರದಿ: ಖಾಜಾ ಹುಸೇನ್ ಬಾಬಾ, ಜಾಲಹಳ್ಳಿ

ದುರ್ಗಾಷ್ಟಮಿ ಸಂಭ್ರಮ ಹೋಮ ಕುಂಕುಮಾರ್ಚನೆ 200ಕ್ಕೂ ಹೆಚ್ಚು ಸುಮಂಗಲಿಯರು ಬಾಗಿ

❑ ನೈಜ್ಯ ದೆಸೆ ನ್ಯೂಸ್



ದೋಟಿಹಾಳ: ಕುಷ್ಟಗಿ ತಾಲೂಕಿನ ದೋಟಿಹಾಳ ಗ್ರಾಮದಲ್ಲಿ ದುರ್ಗಾಷ್ಟಮಿ ಅಂಗವಾಗಿ ದೇವಾಂಗ ಸಮಾಜದ ಶ್ರೀ ರುದ್ರಮುನಿಸ್ವಾಮಿ ದೇವಾಂಗ ಮಠದಲ್ಲಿ ಹೋಮ ಹಾಗೂ ಕುಂಕುಮಾರ್ಚನೆ ಕಾರ್ಯಕ್ರಮಥಿ ಭಕ್ತಿಭಾವದಿಂದ ಜರುಗಿತು.ಕಾರ್ಯಕ್ರಮದಲ್ಲಿ 200ಕ್ಕೂ ಹೆಚ್ಚು ಸುಮಂಗಲಿಯರು ಭಾಗವಹಿಸಿ ಕುಂಕುಮಾರ್ಚನೆ ನೆರವೇರಿಸಿದರು. ಶ್ರೀ ರುದ್ರಮುನಿಸ್ವಾಮಿ ದೇವಾಂಗ ಮಠ ಹಾಗೂ ಶ್ರೀ ಈಶ್ವರಸ್ವಾಮಿ ದೇವಾಂಗ ಮಠದ ವತಿಯಿಂದ ಹೋಮದ ಧಾರ್ಮಿಕ ವಿಧಿವಿಧಾನಗಳನ್ನು ನೆರವೇರಿಸಲಾಯಿತು.ದುರ್ಗಾಷ್ಟಮಿಯ ಪ್ರಯುಕ್ತ ನಡೆದ ಕಾರ್ಯಕ್ರಮದಲ್ಲಿ ಮುದ್ದು ಮಕ್ಕಳು ನವದುರ್ಗೆಯರ ವಿವಿಧ ವೇಷಭೂಷಣಗಳನ್ನು ಧರಿಸಿ ಆಗಮಿಸಿದ್ದು, ಎಲ್ಲರ ಗಮನ ಸೆಳೆದರು. ಮಕ್ಕಳ ಆಕರ್ಷಕ ವೇಷಭೂಷಣಗಳು ಕಾರ್ಯಕ್ರಮಕ್ಕೆ ವಿಶೇಷ ಮೆರುಗು ನೀಡಿದವು. ಭಕ್ತಿಭಾವದಿಂದ ನಡೆದ ಹೋಮ ಹಾಗೂ ಕುಂಕುಮಾರ್ಚನೆ ಕಾರ್ಯಕ್ರಮದಲ್ಲಿ ಮಹಿಳೆಯರು ಪಾಲ್ಗೊಂಡು ಧಾರ್ಮಿಕ ಆಚರಣೆಯಲ್ಲಿ ಭಾಗಿಯಾದರು.ಈ ಸಂದರ್ಭದಲ್ಲಿ ದೇವಾಂಗ ಸಮಾಜದ ಗುರುಹಿರಿಯರು, ಯುವಕರು, ಸುಮಂಗಲಿಯರು ಹಾಗೂ ಸಮಾಜದ ಬಾಂಧವರು ಉಪಸ್ಥಿತರಿದ್ದರು.

ಅಕ್ಟೋಬರ್ 18ರಿಂದ ಅಕ್ಟೋಬರ್ 24ರವರೆಗಿನ ಹವಾಮಾನ ಮುನ್ಸೂಚನೆ

❑ ನೈಜ್ಯ ದೆಸೆ ನ್ಯೂಸ್

ಬೆಂಗಳೂರು:ಕರಾವಳಿ, ಮಲೆನಾಡು ಜಿಲ್ಲೆಗಳಲ್ಲಿ ಮುಂದಿನ ಒಂದು ವಾರ ಮಳೆಯಾಗಲಿದೆ ಎಂದು ಭಾರತೀಯ ಹವಾಮಾನ ಇಲಾಖೆ ಮುನ್ಸೂಚನೆ ನೀಡಿದೆ. ಅ.18ರ ಭಾನುವಾರದಿಂದ ಅ.24ರ ಶನಿವಾರದವರೆಗೂ ಹಲವು ಜಿಲ್ಲೆಗಳಲ್ಲಿ ಮಳೆಯಾಗಲಿದೆ. ಕೆಲವು ಕಡೆಗಳಲ್ಲಿ ಭಾ–ರಿಯಿಂದ ಅತಿ ಭಾರಿ ಮಳೆಯಾದರೆ, ಕೆಲವು ಜಿಲ್ಲೆಗಳಲ್ಲಿ ಭಾರಿ ಮಳೆಯಾಗಬಹುದು ಎಂದು ತಿಳಿಸಲಾಗಿದೆ.ಭಾನುವಾರದಂದು ಕೊಡಗು, ತುಮಕೂರು, ಚಿಕ್ಕಬಳ್ಳಾಪುರ, ಕೋಲಾರ ಹಾಗೂ ಬೆಂಗಳೂರು ಗ್ರಾಮಾಂತರ ಜಿಲ್ಲೆಯಲ್ಲಿ ಭಾ–ರಿಯಿಂದ ಅತಿ ಭಾರಿ ಮಳೆಯಾಗುವ ಮುನ್ಸೂಚನೆ ಇರುವುದರಿಂದ ಆರೆಂಜ್ ಅಲರ್ಟ್ ಘೋಷಣೆ ಮಾಡಲಾಗಿದೆ. ದಕ್ಷಿಣ ಕನ್ನಡ, ಚಿಕ್ಕಮಗಳೂರು, ಹಾಸನ, ಮಂಡ್ಯ, ಮೈಸೂರು, ಬೆಂಗಳೂರು ನಗರ, ಬೆಂಗಳೂರು ದಕ್ಷಿಣ, ಚಾಮರಾಜನಗರ ಜಿಲ್ಲೆಗಳಲ್ಲಿ ಭಾರಿ ಮಳೆಯಾಗುವ ಸೂಚನೆ ಇರುವುದರಿಂದ ಯಲ್ಲೋ ಅಲರ್ಟ್ ಅನ್ನು ಘೋಷಣೆ ಮಾಡಲಾಗಿದೆ. ಉತ್ತರ ಕರ್ನಾಟಕದ ಕೆಲವು ಜಿಲ್ಲೆಗಳಲ್ಲಿ ಮಳೆಯಾಗಲಿದೆ.ಯಾವ ದಿನ ಹೇಗೆಅ.18ರ ಭಾನುವಾರದಕ್ಷಿಣ ಕನ್ನಡ ಜಿಲ್ಲೆಯ ಒಂದೆರಡು ಕಡೆಗಳಲ್ಲಿ ಗುಡುಗು ಸಹಿತ ಭಾರಿ ಮಳೆಯಾಗುವ ಸಾಧ್ಯತೆಯಿದ್ದು ಯಲ್ಲೋ ಅಲರ್ಟ್ . ಉಡುಪಿ ಮತ್ತು ಉತ್ತರ ಕನ್ನಡ ಜಿಲ್ಲೆಗಳ ಅನೇಕ ಕಡೆಗಳಲ್ಲಿ ಗುಡುಗು ಸಹಿತ ಸಾಧಾರಣದಿಂದ ಮಧ್ಯಮ ಮಳೆಯಾಗುವ ಸಾಧ್ಯತೆಯಿದೆ.ಬೆಂಗಳೂರು (ಗ್ರಾಮಾಂತರ), ಚಿಕ್ಕಬಳ್ಳಾಪುರ, ಕೊಡಗು, ಕೋಲಾರ ಮತ್ತು ತುಮಕೂರು ಜಿಲ್ಲೆಗಳ ಒಂದೆರಡು ಕಡೆಗಳಲ್ಲಿ ಗುಡುಗು ಸಹಿತ ಭಾರೀ ಮಳೆಯಿಂದ ಅತಿ ಭಾರೀ ಮಳೆಯಾಗಬಹುದು.



ಗಾಳಿಯುಗಂಟೆಗೆ 30–40 ಕಿ.ಮೀ. ವೇಗದಲ್ಲಿ ಬೀಸುವ ಸಾಧ್ಯತೆಯಿದೆ. ಬೆಂಗಳೂರು (ನಗರ), ಚಾಮರಾಜನಗರ, ಚಿಕ್ಕಮಗಳೂರು, ಹಾಸನ, ಮಂಡ್ಯ, ಮೈಸೂರು ಮತ್ತು ಬೆಂಗಳೂರು ದಕ್ಷಿಣ ಜಿಲ್ಲೆಗಳ ಒಂದೆರಡು ಕಡೆಗಳಲ್ಲಿ ಗುಡುಗು ಸಹಿತ ಭಾರೀ ಮಳೆಯಾಗಬಹುದು. ಬಳ್ಳಾರಿ, ಚಿತ್ರದುರ್ಗ, ದಾವಣಗೆರೆ, ಶಿವಮೊಗ್ಗ ಮತ್ತು ವಿಜಯನಗರ ಜಿಲ್ಲೆಗಳ ಬಹುತೇಕ ಕಡೆಗಳಲ್ಲಿ ಗುಡುಗು ಸಹಿತ ಸಾಧಾರಣದಿಂದ ಮಧ್ಯಮ ಮಳೆಯಾಗುವ ಸಾಧ್ಯತೆಯಿದೆ.ಬೆಳಗಾವಿ, ಧಾರವಾಡ, ಗದಗ ಮತ್ತು ಹಾವೇರಿ ಜಿಲ್ಲೆಗಳ ಕೆಲವು ಕಡೆಗಳಲ್ಲಿ ಗುಡುಗು ಸಹಿತ ಸಾಧಾರಣ ಮಳೆಯಾಗಲಿದ್ದು ಗಾಳಿಯು ಗಂಟೆಗೆ 30–40 ಕಿ.ಮೀ ವೇಗದಲ್ಲಿ ಬೀಸಬಹುದು,. ಬಾಗಲಕೋಟೆ, ಕೊಪ್ಪಳ ಮತ್ತು ರಾಯಚೂರು ಜಿಲ್ಲೆಗಳ ಕೆಲವು ಕಡೆಗಳಲ್ಲಿ ಗುಡುಗು ಸಹಿತ ಹಗುರ ಮಳೆಯಾಗಲಿದ್ದು,ಬೀದರ್, ಕಲಬುರಗಿ, ವಿಜಯಪುರ ಮತ್ತು ಯಾದಗಿರಿ ಜಿಲ್ಲೆಗಳಲ್ಲಿ ಬಹುತೇಕ ಒಣ ಹವಾಮಾನವಿರಲಿದೆ.ಅ.19ರ ಸೋಮವಾರದಕ್ಷಿಣ ಕನ್ನಡ, ಉಡುಪಿ ಮತ್ತು ಉತ್ತರ ಕನ್ನಡ ಜಿಲ್ಲೆಗಳ ಬಹುತೇಕ ಕಡೆಗಳಲ್ಲಿ ಗುಡುಗು ಸಹಿತ ಸಾಧಾರಣದಿಂದ ಮಧ್ಯಮ ಮಳೆಯಾಗುವ ಸಾಧ್ಯತೆಯಿದೆ.ಚಿಕ್ಕಮಗಳೂರು, ಚಿತ್ರದುರ್ಗ, ಹಾಸನ, ಕೊಡಗು ಮತ್ತು ತುಮಕೂರು ಜಿಲ್ಲೆಗಳ ಒಂದೆರಡು ಕಡೆಗಳಲ್ಲಿ ಗುಡುಗು ಸಹಿತ ಭಾರೀ ಮಳೆಯಾಗಲಿದ್ದು, ಗಾಳಿ ವೇಗವು ಗಂಟೆಗೆ 30–40 ಕಿ.ಮೀ. ಇರಲಿದೆ.ಬಳ್ಳಾರಿ, ಬೆಂಗಳೂರು (ಗ್ರಾಮಾಂತರ), ಬೆಂಗಳೂರು (ನಗರ), ಚಾಮರಾಜನಗರ, ಚಿಕ್ಕಬಳ್ಳಾಪುರ, ದಾವಣಗೆರೆ, ಕೋಲಾರ, ಮಂಡ್ಯ, ಮೈಸೂರು, ಬೆಗಳೂರು ದಕ್ಷಿಣ, ಶಿವಮೊಗ್ಗ ಮತ್ತು ವಿಜಯನಗರ ಜಿಲ್ಲೆಗಳ ಬಹುತೇಕ ಕಡೆಗಳಲ್ಲಿ ಗುಡುಗು ಸಹಿತ ಸಾಧಾರಣದಿಂದ ಮಧ್ಯಮ ಮಳೆಯಾಗಲಿದೆ.ಬೆಳಗಾವಿ, ಧಾರವಾಡ, ಗದಗ ಮತ್ತು ಹಾವೇರಿ ಜಿಲ್ಲೆಗಳ ಕೆಲವು ಕಡೆಗಳಲ್ಲಿ ಗುಡುಗು ಸಹಿತ ಸಾಧಾರಣ ಮಳೆಯಾಗಲಿದ್ದು. ಗಾಳಿಯೂ ಇರಲಿದೆ. ಬಾಗಲಕೋಟೆ ಮತ್ತು ಕೊಪ್ಪಳ ಜಿಲ್ಲೆಗಳ ಕೆಲವು ಕಡೆಗಳಲ್ಲಿ ಗುಡುಗು ಸಹಿತ ಹಗುರ ಮಳೆ ಸಾಧ್ಯತೆಯಿದೆ.. ಬೀದರ್, ಕಲಬುರಗಿ, ರಾಯಚೂರು, ವಿಜಯಪುರ ಮತ್ತು ಯಾದಗಿರಿ ಜಿಲ್ಲೆಗಳಲ್ಲಿ ಬಹುತೇಕ ಒಣ ಹವಾಮಾನವಿರುವ ಸಾಧ್ಯತೆಯಿದೆ.ಅ.20ರ ಮಂಗಳವಾರದಕ್ಷಿಣ ಕನ್ನಡ, ಉಡುಪಿ ಮತ್ತು ಉತ್ತರ ಕನ್ನಡ ಜಿಲ್ಲೆಗಳ ಅನೇಕ ಕಡೆಗಳಲ್ಲಿ ಗುಡುಗು ಸಹಿತ ಸಾಧಾರಣದಿಂದ ಮಧ್ಯಮ ಮಳೆಯಾಗುವ ಸಾಧ್ಯತೆಯಿದೆ.ಬೆಂಗಳೂರು (ಗ್ರಾಮಾಂತರ), ಬೆಂಗಳೂರು (ನಗರ), ಚಾಮರಾಜನಗರ, ಮಂಡ್ಯ, ಮೈಸೂರು ಮತ್ತು ಬೆಂಗಳೂರು ದಕ್ಷಿಣ ಜಿಲ್ಲೆಗಳ ಒಂದೆರಡು ಕಡೆಗಳಲ್ಲಿ ಗುಡುಗು ಸಹಿತ ಭಾರೀ ಮಳೆಯಾಗಲಿದೆ. ಬಳ್ಳಾರಿ, ಚಿಕ್ಕಬಳ್ಳಾಪುರ, ಚಿಕ್ಕಮಗಳೂರು, ಚಿತ್ರದುರ್ಗ, ದಾವಣಗೆರೆ, ಹಾಸನ, ಕೊಡಗು, ಕೋಲಾರ, ಶಿವಮೊಗ್ಗ, ತುಮಕೂರು ಮತ್ತು ವಿಜಯನಗರ ಜಿಲ್ಲೆಯಲ್ಲಿ ಸಾಧಾರಣ ಮಳೆ ಇರಲಿದೆ.ಬೆಳಗಾವಿ, ಧಾರವಾಡ, ಗದಗ ಮತ್ತು ಹಾವೇರಿ ಜಿಲ್ಲೆಗಳ ಒಂದೆರಡು ಕಡೆಗಳಲ್ಲಿ ಗುಡುಗು ಸಹಿತ ಹಗುರ ಮಳೆಯಾಗಲಿದ್ದು, ಬಾಗಲಕೋಟೆ, ಬೀದರ್, ಕಲಬುರಗಿ, ಕೊಪ್ಪಳ, ರಾಯಚೂರು, ವಿಜಯಪುರ ಮತ್ತು ಯಾದಗಿರಿ ಜಿಲ್ಲೆಗಳಲ್ಲಿ ಶುಷ್ಕ ಹವಾಮಾನವಿರಲಿದೆ.ಅ.21ರ ಬುಧವಾರದಕ್ಷಿಣ ಕನ್ನಡ, ಉಡುಪಿ ಮತ್ತು ಉತ್ತರ ಕನ್ನಡ ಜಿಲ್ಲೆಗಳ ಕೆಲವೆಡೆ ಸಾಧಾರಣದಿಂದ ಮಧ್ಯಮ ಮಳೆಯಾಗಲಿದೆ.ಚಾಮರಾಜನಗರದ ಒಂದೋ ಎರಡೋ ಕಡೆ ಭಾರೀ ಮಳೆಯಾಗುವ ಸಾಧ್ಯತೆ ಇದೆ. ಬಳ್ಳಾರಿ, ಬೆಂಗಳೂರು (ಗ್ರಾಮೀಣ), ಬೆಂಗಳೂರು (ನಗರ) ಹಾಸನ, ಕೊಡಗು ಮತ್ತು ಮೈಸೂರು, ಚಿಕ್ಕಬಳ್ಳಾಪುರ, ಚಿಕ್ಕಮಗಳೂರು, ಚಿತ್ರದುರ್ಗ, ದಾವಣಗೆರೆ, ಕೋಲಾರ, ಮಂಡ್ಯ, ಬೆಂಗಳೂರು ದಕ್ಷಿಣ, ಶಿವಮೊಗ್ಗ, ತುಮಕೂರು ಮತ್ತು ವಿಜಯನಗರ ಜಿಲ್ಲೆ ಅನೇಕ ಸ್ಥಳಗಳಲ್ಲಿ ಹಗುರದಿಂದ ಸಾಧಾರಣ ಮಳೆಯಾಗಲಿದೆ.ಬೆಳಗಾವಿ, ಧಾರವಾಡ, ಗದಗ ಮತ್ತು ಹಾವೇರಿ ಜಿಲ್ಲೆಗಳ ಒಂದೆರಡು ಕಡೆಗಳಲ್ಲಿ ಹಗುರ ಮಳೆಯಾಗುವ ಸಾಧ್ಯತೆಯಿದೆ. ಬಾಗಲಕೋಟೆ, ಬೀದರ್, ಕಲಬುರಗಿ, ಕೊಪ್ಪಳ, ರಾಯಚೂರು, ವಿಜಯಪುರ ಮತ್ತು ಯಾದಗಿರಿ ಜಿಲ್ಲೆಗಳಲ್ಲಿ ಬಹುತೇಕ ಬಿಸಿಲಿನ ವಾತಾವರಣ ಕಂಡು ಬರಲಿದೆ

ನೇಮಕಾತಿ ಪ್ರಕಟಣೆ

KEA ನೇಮಕಾತಿ 2026 □ 247 ಪ್ರಾಂಶುಪಾಲರ ಹುದ್ದೆಗಳಿಗೆ ಆನ್‌ಲೈನ್‌ನಲ್ಲಿ ಅರ್ಜಿ ಸಲ್ಲಿಸಿ. ಏಇಂ ನೇಮಕಾತಿ 2026: 247 ಪ್ರಾಂಶುಪಾಲರ ಹುದ್ದೆಗಳಿಗೆ ಅರ್ಜಿ ಸಲ್ಲಿಸಿ. ಕರ್ನಾಟಕ ಪರೀಕ್ಷಾ ಪ್ರಾಧಿಕಾರವು (KEA) ಸೆಪ್ಟೆಂಬರ್ 2026ರ ಅಧಿಕೃತ ಅಧಿಸೂಚನೆಯ ಮೂಲಕ ಪ್ರಾಂಶುಪಾಲರ ಹುದ್ದೆಗಳನ್ನು ಭರ್ತಿ ಮಾಡಲು ಅರ್ಹ ಮತ್ತು ಆಸಕ್ತ ಅಭ್ಯರ್ಥಿಗಳಿಂದ ಅರ್ಜಿಗಳನ್ನು ಆಹ್ವಾನಿಸಿದೆ. ಕರ್ನಾಟಕ ಸರ್ಕಾರದಲ್ಲಿ ಉದ್ಯೋಗವನ್ನು ಬಯಸುವವರು ಈ ಅವಕಾಶವನ್ನು ಬಳಸಿಕೊಳ್ಳಬಹುದು. ಆಸಕ್ತ ಅಭ್ಯರ್ಥಿಗಳು ನಿಗದಿತ ದಿನಾಂಕದೊಳಗೆ ಆನ್‌ಲೈನ್‌ನಲ್ಲಿ ಅರ್ಜಿ ಸಲ್ಲಿಸಬಹುದು. ಸಂಸ್ಥೆಯ ಹೆಸರು: ಕರ್ನಾಟಕ ಪರೀಕ್ಷಾ ಪ್ರಾಧಿಕಾರ (KEA) ಹುದ್ದೆಗಳ ಸಂಖ್ಯೆ: 247 ಉದ್ಯೋಗದ ಸ್ಥಳ: ಕರ್ನಾಟಕ ಹುದ್ದೆಯ ಹೆಸರು: ಪ್ರಾಂಶುಪಾಲರು ವೇತನ: ತಿಂಗಳಿಗೆ ರೂ. 90,200 □ 1,59,200/-.ಆನ್‌ಲೈನ್‌ನಲ್ಲಿ ಅರ್ಜಿ ಸಲ್ಲಿಸಲು ಕೊನೆಯ ದಿನಾಂಕ: 25-ಅಕ್ಟೋಬರ್-2026. ಅಧಿಕೃತ ವೆಬ್‌ಸೈಟ್: cetonline.karnataka.gov.in

ಕ್ರಿಕೆಟ್ ಜೊತೆಗೆ ಗ್ರಾಮೀಣ ಕ್ರೀಡೆಗಳಿಗೂ ಯುವಕರು ಆದ್ಯತೆ ನೀಡಲಿ: ಹೊಸಕೋಟೆ ಜಗದೀಶ್

❑ ನೈಜ್ಯ ದೆಸೆ ನ್ಯೂಸ್

ಬಳ್ಳಾರಿ / ಕಂಪ್ಲಿ: ಇತ್ತೀಚಿನ ದಿನಗಳಲ್ಲಿ ಗ್ರಾಮೀಣ ಕ್ರೀಡೆಗಳು ನಶಿಸುತ್ತಿದ್ದು, ಯುವ ಪೀಳಿಗೆಯು ಕ್ರಿಕೆಟ್ ಜೊತೆಗೆ ನಮ್ಮ ಸಾಂಪ್ರದಾಯಿಕ ಗ್ರಾಮೀಣ ಕ್ರೀಡೆಗಳ ಕಡೆಗೂ ಹೆಚ್ಚಿನ ಆದ್ಯತೆ ನೀಡಬೇಕು ಎಂದು ವೀರಶೈವ ಲಿಂಗಾಯತ ಮಹಾವೇದಿಕೆಯ ಜಿಲ್ಲಾಧ್ಯಕ್ಷ ಹೊಸಕೋಟೆ ಜಗದೀಶ್ ತಿಳಿಸಿದ್ದಾರೆ.ಪಟ್ಟಣದ ಷಾಮಿಯಾಚಂದ್ ಸರ್ಕಾರಿ ಕಾಲೇಜು ಆವರಣದಲ್ಲಿ ಶನಿವಾರ ಆರಂಭಗೊಂಡ 'ಗಂಡುಗಲಿ ಕುಮಾರ ಸೀಸನ್-2' ಕ್ರಿಕೆಟ್ ಪಂದ್ಯಾವಳಿಯನ್ನು ಉದ್ಘಾಟಿಸಿ ಅವರು ಮಾತನಾಡಿದರು. ಕ್ರೀಡೆಗಳು ಕೇವಲ ಮನರಂಜನೆಯಲ್ಲ, ಅವು ದೈಹಿಕ ಮತ್ತು ಮಾನಸಿಕ ಸದೃಢತೆಗೆ ಅತ್ಯಂತ ಸಹಕಾರಿಯಾಗಿವೆ. ಜೀವನದ ಪ್ರತಿಯೊಂದು ಹಂತದಲ್ಲೂ ಕ್ರೀಡಾ ಮನೋಭಾವವನ್ನು ಮೈಗೂಡಿಸಿಕೊಂಡಾಗ



ಆರೋಗ್ಯ ವೃದ್ಧಿಸುವುದರ ಜೊತೆಗೆ ಯುವ ಪ್ರತಿಭೆಗಳ ಅನಾವರಣಕ್ಕೆ ಉತ್ತಮ ವೇದಿಕೆ ಸಿಗುತ್ತದೆ. ಇಂತಹ ಪಂದ್ಯಾವಳಿಗಳಲ್ಲಿ ಗ್ರಾಮೀಣ ಯುವಕರು ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸಿ, ಕ್ರೀಡಾಸ್ಫೂರ್ತಿ ಮೆರೆಯಬೇಕು. ಇಲ್ಲಿನ ಸಾಧನೆಯ ಮೂಲಕ ಜಿಲ್ಲಾ ಹಾಗೂ ರಾಜ್ಯ ಮಟ್ಟದಲ್ಲಿ ಕ್ರೀಡಾ ರಂಗವನ್ನು ಪ್ರತಿನಿಧಿಸುವಂತಾಗಬೇಕು ಎಂದು ಅವರು ಆಶಿಸಿದರು.ಬಳಿಕ ನಡೆದ ಮೊದಲ ಪಂದ್ಯಕ್ಕೆ ಅವರು ಅದ್ದೂರಿಯಾಗಿ ಚಾಲನೆ ನೀಡಿದರು.

ಈ ಆಕರ್ಷಕ ಟೂರ್ನಮೆಂಟ್‌ನಲ್ಲಿ ಒಟ್ಟು 10 ತಂಡಗಳು ಭಾಗವಹಿಸಿದ್ದು, ವಿಜೇತ ತಂಡಕ್ಕೆ ಪ್ರಥಮ ಬಹುಮಾನವಾಗಿ 30 ಸಾವಿರ ರೂಪಾಯಿ ಹಾಗೂ ರನ್ನರ್-ಅಪ್ ತಂಡಕ್ಕೆ ದ್ವಿತೀಯ ಬಹುಮಾನವಾಗಿ 10 ಸಾವಿರ ರೂಪಾಯಿ ನಗದು ಮತ್ತು ಆಕರ್ಷಕ ಟ್ರೋಫಿ ನೀಡಲಾಗುವುದು ಎಂದು ಆಯೋಜಕರು ತಿಳಿಸಿದರು.ಈ ಸಂದರ್ಭದಲ್ಲಿ ಪಂದ್ಯಾವಳಿಯ ಆಯೋಜಕರಾದ ಬಿ. ನೂರ್ ಮುಕ್ತಾರ್, ಪ್ರಾಯೋಜಕರಾದ ವಾಬ್‌ಪೇ ಸಂಸ್ಥೆಯ ಇಮ್ರಾನ್, ಸ್ಕೈಲ್ಯಾಂಡ್ ರಿಯಾಲಿಟಿಯ ಅಫ್ರೀದಿ, ಗೋಲ್ಡನ್ ಟೈಗರ್ ಚಾಯ್‌ನ ಕಲೀಲ್, ಬನಸೂರಿ ಅಗರ್ ಬತ್ತಿ ಸಂಸ್ಥೆಯ ರಾಮಸಾಗರ ಅನಿಲ, ಹೈಸ್ಕೂಲ್ ತಂಡದ ಸದಸ್ಯರು, ಮಹೇಶ (ಕರಡಿ) ಸೇರಿದಂತೆ ಪ್ರಮುಖರು ಹಾಗೂ ಸ್ಥಳೀಯ ಕ್ರೀಡಾಪಟುಗಳು ಉಪಸ್ಥಿತ-ರಿದ್ದರು.ವರದಿ : ಜಿಲಾನಸಾಬ್ ಬಡಿಗೇರ್

ತೆಲಂಗಾಣಕ್ಕೆ ಕರ್ನಾಟಕ ಸರ್ಕಾರ ನೀರು ಬಿಡುವುದು ಏತಕ್ಕೆ. ರೈತರಿಗೆ ನೀರು ಹರಿಸುವುದನ್ನು ಬಿಟ್ಟು ರೈತರಿಗೆ ಮೋಸ ಮಾಡಿದ ರಾಜ್ಯ ಸರ್ಕಾರ

❑ ನೈಜ್ಯ ದೆಸೆ ನ್ಯೂಸ್



ಬಸವಸಾಗರ ಜಲಾಶಯದಿಂದ ತೆಲಂಗಾಣಕ್ಕೆ ನೀರು ಬಿಡುವ ಸರ್ಕಾರ ಹಾಗೂ ಕೆಬಿ ಜನಲ್ ನೀರಾವರಿ ಇಲಾಖೆ ಅಧಿಕಾರಗಳ ಬಗ್ಗೆ ಭಾರತೀಯ ಕೃಷಿಕ ಸಮಾಜ ರೈತ ಸಂಘದ ಹುಣಸಗಿ ತಾಲೂಕ್ ಯುವ ಘಟಕದ ಅಧ್ಯಕ್ಷರು ಗುರುರಾಜ ಬಳೂರಗಿ ಇವರು ನವಂಬರ್ 30ರವರೆಗೆ ನಿರಂತರವಾಗಿ ನೀರು ಹರಿಸಬೇಕೆಂದು ವ್ಯಕ್ತಪಡಿಸಿದರು ಇಲ್ಲವಾದಲ್ಲಿ ಕೆ ಬಿ ಜನಲ್ ನಾರಾಯಣಪುರ ಆಫೀಸಿಗೆ ರೈತರೊಂದಿಗೆ ಮುತ್ತಿಗೆ ಹಾಕು ಬೇಕಾಗುತ್ತದೆ ಮಾಡುವ ಅವಕಾಶ ಕೊಡಬೇಡಿ ಎಂದು ಕೆಬಿ ಜನಲ್ ಅಧಿಕಾರಿಗಳಿಗೆ ಮನವಿ ಇಲ್ಲವಾದಲ್ಲಿ ರಾಜ್ಯ ಕಾರ್ಯಧ್ಯಕ್ಷರ ಮಲ್ಲನಗೌಡ ಹಗರಟಗಿ ಹಾಗೂ ತಾಲೂಕ ಅಧ್ಯಕ್ಷರು ಮಲ್ಲನಗೌಡ ಗುಂಡಲಗೇರಿ ಜಿಲ್ಲಾ ಕಾರ್ಯಧ್ಯಕ್ಷರು ಶಿವಶರಣಪ್ಪ ಸೌಕಾರ್ ತಡಿಪಿಡಿ ನೇತೃತ್ವದಲ್ಲಿ ಹಾಗೂ ಎಲ್ಲಾ ರೈತರೊಂದಿಗೆ ಉಗ್ರವಾದ ಹೋರಾಟ ಹಮ್ಮಿಕೊಳ್ಳಲಾಗುತ್ತದೆ ಯಾದಗಿರಿ ಜಿಲ್ಲಾ ಉಸ್ತುವಾರಿ ಮಂತ್ರಿಗಳು ಹಾಗೂ ಸ್ಥಳೀಯ ಶಾಸಕರು ನೀರಿನ ಬಗ್ಗೆ ಶೀಘ್ರದಲ್ಲೇ ವಾರ ಬಂದಿ ವೇಳಾಪಟ್ಟಿಯನ್ನು ಬದಲಾವಣೆ ಮಾತನಾಡಬೇಕೆಂದು ತಮ್ಮಲ್ಲಿ ಮನವಿ ಜೈ ಜವಾನ್ ಜೈ ಕಿಸಾನ್

ನವರಾತ್ರಿ ನಿಮಿತ್ತ ವಿವಿಧ ಮಠಗಳಿಗೆ ಮಾಜಿ ಶಾಸಕ ರಾಜಾ ವೆಂಕಟಪ್ಪ ನಾಯಕ ಭೇಟಿ

❑ ನೈಜ್ಯ ದೆಸೆ ನ್ಯೂಸ್

ಸಿರವಾರ, ಅ. 18: ಸಮಾಜದಲ್ಲಿ ಧಾರ್ಮಿಕ ನಂಬಿಕೆ, ಭಕ್ತಿ, ಸಂಸ್ಕಾರ ಹಾಗೂ ಭಾರತೀಯ ಸಂಸ್ಕೃತಿಯ ಪರಂಪರೆ ಉಳಿದು ಬೆಳೆಯುವಲ್ಲಿ ಮಠಗಳ ಕೊಡುಗೆ ಅಪಾರವಾಗಿದೆ. ಪುರಾಣ, ಪುಣ್ಯಕಥೆ ಹಾಗೂ ಧಾರ್ಮಿಕ ಪ್ರವಚನಗಳ ಮೂಲಕ ದೊರೆಯುವ ಜೀವನ ಸಂದೇಶಗಳನ್ನು ಪ್ರತಿಯೊಬ್ಬರೂ ತಮ್ಮ ಬದುಕಿನಲ್ಲಿ ಅಳವಡಿಸಿಕೊಂಡು ಸನ್ಮಾರ್ಗದಲ್ಲಿ ಸಾಗಬೇಕು ಎಂದು ಮಾನ್ವಿ ವಿಧಾನಸಭಾ ಕ್ಷೇತ್ರದ ಮಾಜಿ ಶಾಸಕ ರಾಜಾ ವೆಂಕಟಪ್ಪ ನಾಯಕ ಹೇಳಿದರು.ನವರಾತ್ರಿ ಹಬ್ಬದ ಅಂಗವಾಗಿ ತಾಲೂಕಿನ ನವಲಕಲ್



ಗ್ರಾಮದ ಶ್ರೀ ಶಾಂಭವಿ ಮಠ ಸೇರಿದಂತೆ ಹೀರಾ ಹಾಗೂ ಚಿಂಚರಕಿ ಗ್ರಾಮಗಳಲ್ಲಿ ನಡೆದ ಶ್ರೀದೇವಿ ಪುರಾಣ ಪ್ರವಚನ ಕಾರ್ಯಕ್ರಮಗಳಲ್ಲಿ ಭಾಗವಹಿಸಿ, ದೇವಿಯ ದರ್ಶನ ಪಡೆದ ಅವರು ಮಠಾಧೀಶ-ರಿಂದ ಆಶೀರ್ವಾದ ಪಡೆದುಕೊಂಡರು. ಧಾರ್ಮಿಕ ಮಠಗಳು ಸಮಾಜದಲ್ಲಿ ಭಕ್ತಿ ಮತ್ತು ಆಧ್ಯಾತ್ಮಿಕತೆಯನ್ನು ಬೆಳೆಸುವುದರ ಜೊತೆಗೆ ಯುವ ಪೀಳಿಗೆಗೆ ಸಂಸ್ಕಾರ, ನೈತಿ-ಕ ಮೌಲ್ಯ ಹಾಗೂ ಮಾನವೀಯತೆಯ ಪಾಠಗಳನ್ನು ಕಲಿಸುತ್ತಿವೆ. ಇಂದಿನ ಆಧ-ುನಿಕ ಯುಗದಲ್ಲಿ ನಮ್ಮ ಧಾರ್ಮಿಕ ಪರಂಪರೆ ಮತ್ತು ಸಂಸ್ಕೃತಿಯನ್ನು ಮುಂದಿನ ಪೀಳಿಗೆಗೆ ಪರಿಚಯಿಸುವ ಕಾರ್ಯದಲ್ಲಿ ಇಂತಹ ಮಠಗಳು ಮಹತ್ವದ ಪಾತ್ರ ವಹಿಸುತ್ತಿವೆ ಎಂದು ಅವರು ಅಭಿಪ್ರಾಯಪಟ್ಟರು.ನವರಾತ್ರಿ ಹಬ್ಬವು ದುಷ್ಟಶಕ್ತಿಗಳ ವಿರುದ್ಧ ಶಕ್ತಿಯ ವಿಜಯವನ್ನು ಸಾರುವ ಪವಿತ್ರ ಹಬ್ಬವಾಗಿದ್ದು, ನಾಡಿನಾದ್ಯಂತ ಭಕ್ತಿಭಾವದಿಂದ ಆಚರಿಸಲಾಗುತ್ತದೆ. ಈ ಸಂದರ್ಭದಲ್ಲಿ ನಡೆಯುವ ದೇವಿ ಪುರಾಣ ಪ್ರವಚನಗಳು ಭಕ್ತರಲ್ಲಿ ಧಾರ್ಮಿಕ ಜಾಗೃತಿ ಮೂಡಿಸುವುದರೊಂದಿಗೆ ಸಮಾಜದಲ್ಲಿ ಸೌಹಾರ್ದತೆ ಮತ್ತು ಸದ್ಭಾವನೆಯನ್ನು ಬೆಳೆಸಲು ಸಹಕಾರಿಯಾಗಿವೆ.ಈ ಸಂದರ್ಭದಲ್ಲಿ ಜೆಡಿಎಸ್ ಸಿರವಾರ ತಾಲೂಕು ಅಧ್ಯಕ್ಷ ಮಲ್ಲಿಕಾರ್ಜುನ ಪಾಟೀಲ್ ಬಲ್ಲಟಗಿ, ರಾಮಾಚಾರಿ ಜಾಲಾಪುರ ಕ್ಯಾಂಪ್, ಎಚ್. ಮೌನೇಶ್ ಗೌಡ, ಸಿದ್ದಪ್ಪ ಗೌಡ ಹೀರಾ, ಹನುಮಂತ್ರಾಯ ಹೀರಾ, ಮೌನೇಶ್ ನಾಯಕ ಹೀರಾ, ಸಂಗಮೇಶ ಹೀರಾ ಸೇ-ರಿದಂತೆ ಗ್ರಾಮದ ಹಿರಿಯರು, ಮುಖಂಡರು ಹಾಗೂ ಭಕ್ತರು ಉಪಸ್ಥಿತರಿದ್ದರು.

ಆರೋಗ್ಯದ ಕಡೆಗೆ ಜನರು ಹೆಚ್ಚಿನ ಗಮನ ಹರಿಸಲಿ: ಎನ್. ಕರಿಬಸವ ಕರೆ

❑ ನೈಜ್ಯ ದೆಸೆ ನ್ಯೂಸ್

ಬಳ್ಳಾರಿ / ಕಂಪ್ಲಿ : "ದೇಶವನ್ನು ಎಚ್‌ಐವಿ ಏಡ್ಸ್ ಮುಕ್ತ ಭಾರತವನ್ನಾಗಿ ಮಾಡುವ ಮಹದೋದ್ದೇಶದಿಂದ ಸಾರ್ವಜನಿಕರಲ್ಲಿ ಹಾಗೂ ಕಾಲೇಜು ವಿದ್ಯಾರ್ಥಿಗಳಲ್ಲಿ ನಿರಂತರವಾಗಿ ಜಾಗೃತಿ ಮೂಡಿಸಲಾಗುತ್ತಿದೆ," ಎಂದು ಕುರುಗೋಡು ಸಮುದಾಯ ಆರೋಗ್ಯ ಕೇಂದ್ರದ ಆಪ್ತ ಸಮಾಲೋಚಕ ಎನ್. ಕರಿಬಸವ ಹೇಳಿದರು.ಜಿಲ್ಲಾ ಎಚ್‌ಐವಿ ಏಡ್ಸ್ ನಿಯಂತ್ರಣ ಘಟಕ ಬಳ್ಳಾರಿ ಹಾಗೂ ಕುರುಗೋಡು ಸಮುದಾಯ ಆರೋಗ್ಯ



ಕೇಂದ್ರದ ಸಂಯುಕ್ತ ಆಶ್ರಯದಲ್ಲಿ ಪಟ್ಟಣದ ಅಂಬೇಡ್ಕರ್ ಸರ್ಕಲ್ ಹತ್ತಿರದ ಪುನೀತ್ ರಾಜಕುಮಾರ್ ಬಸ್ ನಿಲ್ದಾಣದಲ್ಲಿ ಆಯೋಜಿಸಲಾಗಿದ್ದ 'ಎಚ್‌ಐವಿ/ಎಸ್‌ಟಿಐ ಪರೀಕ್ಷೆ, ಆಪ್ತಸಮಾಲೋಚನೆ, ಚಿಕಿತ್ಸೆ ಸೇವಾ ಸೌಲಭ್ಯಗಳ ಮಾಹಿತಿ ಹಾಗೂ ಮೊಬೈಲ್ ಸ್ಟೇಷನ್ ಪೋರಂ ಏಡ್ಸ್ ಸುರಕ್ಷಾ ಅಭಿಯಾನ'ದಲ್ಲಿ ಅವರು ಮಾತನಾಡಿದರು."ಇತ್ತೀಚಿನ ಆಧುನಿಕ ದಿನಮಾನಗಳಲ್ಲಿ ನಾನಾ ಕಾರಣಗಳಿಂದಾಗಿ ಜನರ ಆರೋಗ್ಯ ಕ್ಷೀಣಿಸುತ್ತಿರುವುದು ವಿಪರ್ಯಾಸದ ಸಂಗತಿಯಾಗಿದೆ. ಇಂದಿನ ವೈದ್ಯಕೀಯ ಯುಗದಲ್ಲಿ ಪ್ರತಿಯೊಂದು ರೋಗಕ್ಕೂ ಸೂಕ್ತ ಔಷಧಿ ಹಾಗೂ ಚಿಕಿತ್ಸೆಗಳು ಲಭ್ಯವಿವೆ. ಆದ್ದರಿಂದ ಸಾರ್ವಜನಿಕರು ಯಾವುದೇ ಕಾಯಿಲೆಗಳನ್ನು ನಿರ್ಲಕ್ಷಿಸದೆ, ತಮ್ಮ ಆರೋಗ್ಯದ ಕಡೆಗೆ ಹೆಚ್ಚಿನ ಮಟ್ಟದಲ್ಲಿ ಗಮನಹರಿಸಬೇಕು," ಎಂದು ಅವರು ಸಲಹೆ ನೀಡಿದರು.ಈ ಸಂದರ್ಭದಲ್ಲಿ ಪಟ್ಟಣದ ಹೊಸ ಬಸ್ ನಿಲ್ದಾಣ, ಸಂತೆ ಮಾರುಕಟ್ಟೆ ಸೇರಿದಂತೆ ಪ್ರಮುಖ ಜನನಿಬಿಡ ಪ್ರದೇಶಗಳಲ್ಲಿ ಮೊಬೈಲ್ ವಾಹನದ ಮೂಲಕ ಸಾರ್ವಜನಿಕರಿಗೆ ಏಡ್ಸ್ ನಿಯಂತ್ರಣದ ಕುರಿತು ಜಾಗೃತಿ ಮೂಡಿಸಲಾಯಿತು. ಕಾರ್ಯಕ್ರಮದಲ್ಲಿ ಮೈಗ್ರೆಂಟ್ ಎನ್‌ಜಿಒ ಸಂಸ್ಥೆಯ ಆನಂದ್, ರೇಖಾ, ಪ್ರಮುಖರಾದ ಈಶಪ್ಪ, ಇಸ್ಮಾಯಿಲ್, ತಿಪ್ಪೇಸ್ವಾಮಿ, ಗೌಸ್, ವಿರುಪಾಕ್ಷಿ, ಚಾಂದಬಾಷಾ ಸೇ-ರಿದಂತೆ ಆರೋಗ್ಯ ಇಲಾಖೆಯ ಸಿಬ್ಬಂದಿ ಹಾಗೂ ಸಾರ್ವಜನಿಕರು ಉಪಸ್ಥಿತ-ರಿದ್ದರು.ವರದಿ : ಜಿಲಾನಸಾಬ್ ಬಡಿಗೇರ್

ಈಶಾನ್ಯ ಶಿಕ್ಷಕರ ಚುನಾವಣೆ ನಮ್ಮ ಅಭ್ಯರ್ಥಿಪರ ಒಳ್ಳೆಯ ವಾತವರಣ: ಆರ್ ಬಸನಗೌಡ ತುರ್ವಿಹಾಳ

❑ ನೈಜ್ಯ ದೆಸೆ ನ್ಯೂಸ್



ಮಸ್ಕಿ: ಇದೆ ತಿಂಗಳ 23 ರಂದು ನಡೆಯುವ ಈಶಾನ್ಯ ಶಿಕ್ಷಕರ ವಿಧಾನ ಪರಿಷತ್ ಚುನಾವಣೆ ನಡೆಯಲಿದ್ದು, ನಮ್ಮ ಅಭ್ಯರ್ಥಿ ಶರಣಪ್ಪ ಮಟ್ಟೂರ ಪರ ಅತ್ಯುತ್ತಮ ವಾತವರಣ ಇದೆ, ಅವರು ವಕೀಲರಾಗಿ, ಹಿಂದೆ ಕೂಡ ವಿಧಾನ ಪರಿಷತ್ ಸದಸ್ಯರಾಗಿ ಒಳ್ಳೆಯ ಸೇವೆ ಮಾಡಿದ್ದಾರೆ ಅನುಭವಿಗಳಿದ್ದು ಜೊತೆಗೆ ನಮ್ಮ ರಾಜ್ಯ ಸರಕಾರದ ಜನಪರ ಕಾರ್ಯಕ್ರಮಗಳು ,ಶಿಕ್ಷಕರಿಗೆ ಕೈಗೊಂಡಿರುವ ಯೋಜನೆಗಳೆ ನಮ್ಮ ಅಭ್ಯರ್ಥಿ ಗೆಲುವಿಗೆ ಕಾರಣ ಅದಕ್ಕೆ ಬರುವ ಚುನವಣೆಯಲ್ಲಿ ನಮ್ಮ ಭಾಗದ ಶಿಕ್ಷಕರು ನಮಗೆ ಮತದಾನ ಮಾಡಬೇಕು ಮತ್ತಷ್ಟು ಕಾರ್ಯಕ್ರಮಗಳನ್ನು ನೀಡುತ್ತವೆ, ಮಸ್ಕಿಯಲ್ಲಿ ಮುಂದಿನ ದಿನಗಳಲ್ಲಿ ಖಾಯಂ ಬಿಇಒ ಕಛೇ-ರಿ,ಗುರುಭವನ ಮಾಡುವುದಾಗಿ ಭರವಸೆ ನೀಡಿದರು ತಮ್ಮೆಲ್ಲರ ಸಹಕಾರ ನಮ್ಮ ಕಾಂಗ್ರೆಸ್ ಅಭ್ಯರ್ಥಿ ಶರಣಪ್ಪ ಮಟ್ಟೂರು ಮೇಲೆ ಇರಲಿ ಎಂದು ಹೇಳಿದರು,ಈ ಸಂದರ್ಭದಲ್ಲಿ ಕಾಂಗ್ರೆಸ್ ಪಕ್ಷದ ಪದಾಧಿಕಾರಿಗಳು, ಮುಖಂಡರು ಇನ್ನಿತರರು ಇದ್ದರು.

ತಾಪಂ, ಜಿಪಂ ಕರಡು ಮೀಸಲಾತಿ ಪಟ್ಟಿಯಲ್ಲಿ ನನ್ನ ಪಾತ್ರವಿಲ್ಲ:ಆರ್ ಬಸನಗೌಡ ತುರ್ವಿಹಾಳ

❑ ನೈಜ್ಯ ದೆಸೆ ನ್ಯೂಸ್

ಮಸ್ಕಿ: ಬಹಳಷ್ಟು ವರ್ಷಗಳಿಂದ ನೆನಗುದಿಗೆ ಬಿದ್ದಿರುವ ತಾಪಂ ಜಿಪಂ ಚುನಾವಣೆಗೆ ಬಹುತೇಕ ಮುಹೂರ್ತ ಸಿದ್ದವಾಗಿದ್ದು, ಭವಿಷ್ಯ ಡಿಸೆಂಬರ್ ತಿಂಗಳಲ್ಲಿ ಚುನಾವಣೆ ನಡೆಯುವುದು ಎಂದು ಸರಕಾರಹೇಳುತಿ-ದ್ದು, ಅದಕ್ಕೆ ಮಸ್ಕಿ ತಾಲ್ಲೂಕಿನ ಬಹುತೇಕ ಜಿಪಂ, ತಾಪಂ ಮೀಸಲಾತಿ ಕರಡು ಪಟ್ಟಿ



ಬಹಳಷ್ಟುತಾರತಮ್ಯ ಆಗಿದೆ ಎಂಬ ಆರೋಪ ಮುಖಂಡರಲ್ಲಿ,ಕಾರ್ಯಕರ್ತರಲ್ಲಿ ಕಾಂಗ್ರೆಸ್ ಪಕ್ಷದಲ್ಲಿ ಕೇಳಿಬರುತಿದ್ದು,ಅನೇಕರು ಪಕ್ಷದ ವಿರುದ್ಧ ಆಕ್ರೋಶ ವ್ಯಕ್ತಪಡಿಸಿದ್ದಾರೆ, ಅದಕ್ಕೆ ಸ್ವತಃ ಶಾಸಕರಾದ ಆರ್ ಬಸನಗೌಡ ತುರ್ವಿಹಾಳ ಮಾತನಾಡಿ ಸ್ಪಷ್ಟನೇ ನೀಡಿದ್ದು, ಇದರ ವಿಚಾರವಾಗಿ ನಮ್ಮ ಪಾತ್ರವಿಲ್ಲ, ಎಲ್ಲವೂ ಚುನಾವಣೆ ಆಯೋಗದಂತೆ ನಡೆದಿದೆ, ಅವರೆ ಸರ್ವೆ ಮಾಡಿ ಆಯಾ ಜನಸಂಖ್ಯೆ ಅನುಗುಣವಾಗಿ ಮೀಸಲಾತಿ ಪ್ರಕಟಣೆ ಮಾಡಿದ್ದಾರೆ ನನ್ನದು ಕಿಂ-ಚತ್ತು ಯಾವುದೇ ಕೈವಾಡ ಇಲ್ಲ ,ಅದಕ್ಕಾಗಿ ನಮ್ಮ ಕಾರ್ಯಕರ್ತರು ಚುನಾವಣೆ ಘೋಷಣೆಯಾದರೆ ಕ್ಷೇತ್ರದಲ್ಲಿ ಸಂಘಟನೆ ಮಾಡಲಾಗುವುದು, ಕಾರ್ಯಕರ್ತರು ಚುನಾವಣೆ ಎದುರಿಸಲು ಸಿದ್ದರಾಗಬೇಕು ನಮ್ಮ ಕಾಂಗ್ರೆಸ್ ಪಕ್ಷದ ಅಭ್ಯರ್ಥಿಗಳಿಗೆ ಗೆಲ್ಲುವ ಕಾರ್ಯ ಎಲ್ಲರೂ ಸೇರಿ ಮಾಡೋಣ , ಏನೆ ಸಮಸ್ಯೆ ಇದ್ದರು ಪಕ್ಷದ ಚೌಕಟ್ಟಿನಲ್ಲಿ ಒಳಗೆ ಮಾತನಾಡಬೇಕು,ಬರುವ ದಿನಗಳಲ್ಲಿ ಎಲ್ಲಾ ಸಮಸ್ಯೆ ಸರಿಪಡಿಸಲಾಗುದು ಎಂದು ಹೇಳಿದರು.

ಬಳ್ಳಾರಿ ಶಾಖೋತ್ಪನ್ನ ವಿದ್ಯುತ್ ಕೇಂದ್ರದಲ್ಲಿ ಬಿಗಿ ಭದ್ರತೆ: ₹1 ಲಕ್ಷಕ್ಕೂ ಅಧಿಕ ಮೌಲ್ಯದ ಮಾದಕ ವಸ್ತು ಜಪ್ತಿ

❑ ನೈಜ್ಯ ದೆಸೆ ನ್ಯೂಸ್

ಬಳ್ಳಾರಿ / ಕಂಪ್ಲಿ: ರಾಜ್ಯದ ಪ್ರಮುಖ ಹಾಗೂ ಸೂಕ್ಷ್ಮ ಕೈಗಾರಿಕಾ ಸ್ಥಾವರಗಳಲ್ಲಿ ಒಂದಾದ ಕುಡತಿನಿ ಸಮೀಪದ ಬಳ್ಳಾರಿ ಶಾಖೋತ್ಪನ್ನ ವಿದ್ಯುತ್ ಕೇಂದ್ರದಲ್ಲಿ (BTPS) ಕರ್ನಾಟಕ ರಾಜ್ಯ ಕೈಗಾರಿಕಾ ಭದ್ರತಾ ಪಡೆ (KSISF) ಭದ್ರತೆಯನ್ನು ಮತ್ತಷ್ಟು ಕಟ್ಟುನಿಟ್ಟುಗೊಳಿಸಿದೆ. ಪೊಲೀಸ್ ಇನ್ಸ್‌ಪೆಕ್ಟರ್ ಈರಪ್ಪ ಎಸ್.ಬಿ. ನೇತೃತ್ವದಲ್ಲಿ ಇತ್ತೀಚೆಗೆ ನಡೆದ ಭದ್ರತಾ ತಪಾಸಣೆಯಲ್ಲಿ ನೌಕರರು ಹಾಗೂ ಕಾರ್ಮಿಕರ ಆರೋಗ್ಯ ಹಿತದೃಷ್ಟಿಯಿಂದ ನಿಷೇಧಿಸಲಾಗಿದ್ದ ಅಂ-ದಾಜು ₹1 ಲಕ್ಷಕ್ಕೂ ಅಧಿಕ ಮೌಲ್ಯದ ಬಿಡಿ, ಸಿಗರೇಟ್, ತಂಬಾಕು ಹಾಗೂ ಮದ್ಯ ಸೇರಿದಂತೆ ವಿವಿಧ ಮಾದಕ ವಸ್ತುಗಳನ್ನು ಪತ್ತೆ ಹಚ್ಚಿ ಜಪ್ತಿ ಮಾಡಲಾಗಿದೆ.ರಾಜ್ಯಕ್ಕೆ ವಿದ್ಯುತ್ ಪೂರೈಸುವ ಈ ಮಹತ್ವದ ಸ್ಥಾವರಕ್ಕೆ 2016 ರಿಂದಲೂ ಕೆಎ□□□-ಎ□□□ಫ್ ಪಡೆ ಯಶಸ್ವಿಯಾಗಿ ಭದ್ರತೆ ಒದಗಿಸುತ್ತಿದೆ. ಇತ್ತೀಚಿನ ದಿನಗಳಲ್ಲಿ ಸ್ಥಾವರದ ಒಳಗೆ ಸಂಭವಿಸಬಹುದಾದ ಅಪಘಾತಗಳನ್ನು ತಡೆಗಟ್ಟುವ ನಿಟ್ಟಿನಲ್ಲಿ ಹಿರಿಯ ಅಧಿಕಾರಿಗಳ ಮಾರ್ಗದರ್ಶನದಲ್ಲಿ ಹಲವು ಕಟ್ಟುನಿಟ್ಟಿನ ನಿಯಮಗಳನ್ನು ಜಾ-ರಿಗೆ ತರಲಾಗಿದೆ.ಸಂಚಾರ ನಿಯಮಗಳ



ಕಡ್ಡಾಯ ಜಾರಿ:ಸ್ಥಾವರದೊಳಗೆ ಪ್ರವೇಶಿಸುವ ದ್ವಿಚಕ್ರ ವಾಹನ ಸವಾರರು ಕಡ್ಡಾಯವಾಗಿ ಹೆಲ್ಮೆಟ್ ಧರಿಸುವುದು, ಚಾಲನಾ ಪರವಾನಗಿ (DL) ಹಾಗೂ ವಾಹನ ವಿಮೆ (Insurance) ಸೇರಿದಂತೆ ಅಗತ್ಯ ದಾಖಲೆಗಳನ್ನು ಹೊಂದಿರುವುದನ್ನು ಕಡ್ಡಾಯಗೊಳಿಸಲಾಗಿದೆ. ಸರಿಯಾದ ದಾಖಲೆಗಳಿಲ್ಲದ ವಾಹನಗಳ ಪ್ರವೇಶವನ್ನು ಸಂಪೂರ್ಣವಾಗಿ ನಿರ್ಬಂಧಿಸುವ ಮೂಲಕ ಸಂಚಾರಿ ನಿಯಮಗಳನ್ನು ಕಟ್ಟುನಿಟ್ಟಾಗಿ ಜಾರಿಗೊಳಿಸಲಾಗಿದೆ.ಹದ್ದಿನ ಕಣ್ಣು: ಕಳ್ಳತನಕ್ಕೆ ಬ್ರೇ□□□ನ್ಸ್‌ಪೆಕ್ಟರ್ ಈರಪ್ಪ ಎಸ್.ಬಿ ಹಾಗೂ ಸಿಬ್ಬಂದಿಯ ನಿರಂತರ ಪೆಟ್ರೋಲಿಂಗ್ ಮತ್ತು ಬಿಗಿ ಭದ್ರತೆಯ ಪರಿಣಾಮವಾಗಿ, ಕಳೆದ ಮೂರು ತಿಂಗಳುಗಳಿಂದ ಸ್ಥಾವರದಲ್ಲಿ ಯಾವುದೇ ರೀತಿಯ ಕಳ್ಳತನ ಪ್ರಕರಣಗಳು ಸಂಭವಿಸದಂತೆ ತಡೆಯಲಾಗಿದೆ. ಇಡೀ ಯೋಜನಾ ಪ್ರದೇಶದ ಮೇಲೆ ಭದ್ರತಾ ಪಡೆ ಹದ್ದಿನ ಕಣ್ಣಿಟ್ಟಿದ್ದು, ಭದ್ರತೆಯಲ್ಲಿ ಹೊಸ ಮೈಲುಗಲ್ಲು ಸಾಧಿಸಿದೆ.ಕೆಎ□□□ಎ□□□ಫ್ ಅಧಿಕಾರಿಗಳು ಮತ್ತು ಸಿಬ್ಬಂದಿಯ ಈ ದಕ್ಷ ಹಾಗೂ ಪ್ರಾಮಾಣಿಕ ಕರ್ತವ್ಯ ನಿರ್ವಹಣೆಯು ಇಡೀ ಪೊಲೀಸ್ ಇಲಾಖೆಗೆ ಹೆಮ್ಮೆ ತರುವಂತದ್ದಾಗಿದೆ. ಇನ್ನು ಸ್ಥಾವರದ ಸುತ್ತಮುತ್ತಲಿನ ಗ್ರಾಮಸ್ಥರು, ನೌಕರರು, ಗುತ್ತಿಗೆದಾರರು ಹಾಗೂ ಕಾರ್ಮಿಕರ ನಡುವೆ ಉತ್ತಮ ಸಮನ್ವಯ ಸಾಧಿಸುವ ಮೂಲಕ ಭದ್ರತಾ ಪಡೆ ಸಾರ್ವಜನಿಕರ ಅಪಾರ ಪ್ರಶಂಸೆಗೆ ಪಾತ್ರವಾಗಿದೆ. ವರದಿ : ಜಿಲಾನಸಾಬ್ ಬಡಿಗೇರ್



ನಾಡಹಬ್ಬ ಮೈಸೂರು ದಸರಾ: ಇತಿಹಾಸ, ಪರಂಪರೆ ಮತ್ತು ಸಾಂಸ್ಕೃತಿಕ ವೈಭವ – ಲಾಜರ್ ಸಿರಿಲ್

❑ ನೈಜ್ಯ ದೆಸೆ ನ್ಯೂಸ್

ಕರ್ನಾಟಕದ ಕಿರೀಟಪ್ರಾಯವಾದ, ವಿಶ್ವಾದ್ಯಂತ ಖ್ಯಾತಿ ಪಡೆದಿರುವ ಐತಿಹಾಸಿಕ ನಾಡಹಬ್ಬ ಮೈಸೂರು ದಸರಾ ಕೇವಲ ಒಂದು ಹಬ್ಬವಲ್ಲ, ಅದೊಂದು ಕರುನಾಡಿನ ಸಾಂಸ್ಕೃತಿಕ ಸಂಭ್ರಮ. ಹತ್ತು ದಿನಗಳ ಕಾಲ ನಡೆಯುವ ಈ ಮಹೋತ್ಸವವು ರಾಜ್ಯದ ಶ್ರೀಮಂತ ಪರಂಪರೆ ಮತ್ತು ಕಲಾ ವೈಭವವನ್ನು ಜಗತ್ತಿಗೆ ಸಾರುತ್ತದೆ.ದುಷ್ಟ ಶಕ್ತಿಯಾದ ಮಹಿಷಾಸುರನನ್ನು ಚಾಮುಂಡೇಶ್ವರಿ ದೇವಿಯು ವಧಿಸಿದ ವಿಜಯದ ಸಂಕೇತವಾಗಿ ವಿಜಯದಶಮಿಯನ್ನು ಆಚರಿಸಲಾಗುತ್ತದೆ. ಮಹಿಷನ ನಾಡಾಗಿದ್ದ 'ಮೈಸೂರು' ಎಂಬ ಹೆಸರು ಈ ದೇವಿಯ ಹಾಗೂ ದಸರಾ ಆಚರಣೆಯೊಂದಿಗೆ ಆಳವಾಗಿ ಬೆಸೆದುಕೊಂಡಿದೆ.ವಿಜಯನಗರ ಸಾಮ್ರಾಜ್ಯದ ಕಾಲದಿಂದಲೂ ರೂಢಿಯಲ್ಲಿದ್ದ ಈ ಪದ್ಧತಿಯನ್ನು ಮೈಸೂರು ಒಡೆಯರ್ ಅರಸರು ಮುಂದುವರೆಸಿಕೊಂಡು ಬಂದರು. 1610ರಲ್ಲಿ ರಾಜಾ ಒಡೆಯರ್ ಅವರು ಶ್ರೀರಂಗಪಟ್ಟಣದಲ್ಲಿ ದಸರಾ ಮಹೋತ್ಸವವನ್ನು ಆರಂಭಿಸಿದರು.



ನಂತರ ಇದು ಮೈಸೂರು ಅರಮನೆಗೆ ಸ್ಥಳಾಂತರಗೊಂಡು ಇಂದಿಗೂ ನಾಡಹಬ್ಬವಾಗಿ ವಿಜೃಂಭಣೆಯಿಂದ ಆಚರಿಸಲ್ಪಡುತ್ತಿದೆ.ದಸರೆಯ ಮುಖ್ಯ ಆಕರ್ಷಣೆಯೆಂದರೆ ವಿಜಯದಶಮಿಯ ದಿನ ನಡೆಯುವ 'ಜಂಬೂ ಸವಾರಿ'. ಚಿನ್ನದ ಅಂಬಾರಿಯಲ್ಲಿ ವಿರಾಜಮಾನಳಾದ ತಾಯಿ ಚಾಮುಂಡೇಶ್ವರಿಯ ಉತ್ಸವ ಮೂರ್ತಿಯನ್ನು ಗಜಪಡೆಯು (ಮುಖ್ಯ ಆನೆಯ ನೇತೃತ್ವದಲ್ಲಿ) ಅರಮನೆಯಿಂದ ಬನ್ನಿಮಂಟಪದವರೆಗೆ ಹೊತ್ತು ಸಾಗುವ ದೃಶ್ಯ ಅತ್ಯಂತ ರಮಣೀಯ ಮತ್ತು ರೋಮಾಂಚನಕಾರಿ.ಹಬ್ಬದ ದಿನಗಳಲ್ಲಿ ಮೈಸೂರು ನಗರದ ಪ್ರಮುಖ ರಸ್ತೆಗಳು, ವೃತ್ತಗಳು ಹಾಗೂ ಐತಿಹಾಸಿಕ ಕಟ್ಟಡಗಳು ವಿದ್ಯುತ್ ದೀಪಗಳ ಅಲಂಕಾರದಿಂದ ಹಾಲಿನಂತೆ ಬೆಳಗುತ್ತವೆ. ಇದನ್ನು ಕಣ್ತುಂಬಿಕೊಳ್ಳಲು ರಾಜ್ಯ ಹಾಗೂ ಹೊರರಾಜ್ಯಗಳಿಂದ ಲಕ್ಷಾಂತರ ಪ್ರವಾಸಿಗರು ಆಗಮಿಸುತ್ತಾರೆ.ಅಪ್ಪು ಪಾರ್ಕ್ ಬಳಿ ನಡೆಯುವ ದಸರಾ ಪ್ರದರ್ಶನವು ಕರಕುಶಲ ವಸ್ತುಗಳು, ವಾಣಿಜ್ಯ ಮಳಿಗೆಗಳು, ಗೃಹೋಪಯೋಗಿ ವಸ್ತುಗಳ ಮಾರಾಟ ಮತ್ತು ಮನರಂಜನಾ ಆಟಿಕೆಗಳೊಂದಿಗೆ ತಿಂಗಳುಗಳ ಕಾಲ ಜನರ ಸೆಳೆಯುತ್ತದೆ. ಅರಮನೆ ಆವರಣ ಮತ್ತು ವಿವಿಧ ವೇದಿಕೆಗಳಲ್ಲಿ ರಾಜ್ಯ ಹಾಗೂ ರಾಷ್ಟ್ರಮಟ್ಟದ ಖ್ಯಾತ ಕಲಾವಿದರಿಂದ ಶಾಸ್ತ್ರೀಯ ಸಂಗೀತ, ನೃತ್ಯ, ಜಾನಪದ ಕಲೆಗಳು ಮತ್ತು ಯುವ ದಸರಾ ಕಾರ್ಯಕ್ರಮಗಳು ಪ್ರೇಕ್ಷಕರನ್ನು ರಂಜಿಸುತ್ತವೆ.ಮೈಸೂರು ದಸರಾ ಎನ್ನುವುದು ಕೇವಲ ಮನರಂಜನೆಯ ಉತ್ಸವವಲ್ಲ; ಇದು ನಮ್ಮ ರಾಜ್ಯದ ಕಲೆ, ಸಾಹಿತ್ಯ, ಜಾನಪದ ಮತ್ತು ಹಳ್ಳಿಗಾಡಿನ ಸಂಸ್ಕೃತಿಯನ್ನು ಸಂರಕ್ಷಿಸುವ ಮತ್ತು ಮುಂದಿನ ಪೀಳಿಗೆಗೆ ದಾಟಿಸುವ ಪ್ರಮುಖ ವೇದಿಕೆ. ಜಾತಿ, ಧರ್ಮಗಳ ಭೇದವಿಲ್ಲದೆ ಎಲ್ಲಾ ಕನ್ನಡಿಗರು ಒಂದಾಗಿ ಆಚರಿಸುವ ಹಬ್ಬವಿದು.

ವಚನ ದರ್ಶನ

ಎನ್ನ ಕಾಯವ ದಂಡಿಗೆಯ ಮಾಡಯ್ಯಾ, ಎನ್ನ ಶಿರವ ಸೋರೆಯ ಮಾಡಯ್ಯಾ, ಎನ್ನ ನರವ ತಂತಿಯ ಮಾಡಯ್ಯಾ, ಎನ್ನ ಬೆರಳ ಕಡ್ಡಿಯ ಮಾಡಯ್ಯಾ ಬತ್ತೀಸ ರಾಗವ ಹಾಡಯ್ಯಾ, ಉರದಲೊತ್ತಿ ಬಾರಿಸು,ಕೂಡಲಸಂಗಮದೇವಾ

12 ನೇ ಶತಮಾನದ ಶರಣರಾದ ವಿಶ್ವಗುರು ಬಸವಣ್ಣನವರ ಅತ್ಯಂತ ಪ್ರಸಿದ್ಧವಾದ ಹಾಗೂ ಸುಂದರವಾದ ವಚನವಾಗಿದೆ. ಈ ವಚನದಲ್ಲಿ ವಿಶ್ವಗುರು ಬಸವಣ್ಣನವರು ತಮ್ಮ ಸಂಪೂರ್ಣ ದೇಹವನ್ನು ದೇವರ ಸೇವೆಗೆ ಅರ್ಪಿಸಿಕೊಳ್ಳುವಂತೆ ಮತ್ತು ದೇವನೇ ಅದನ್ನು ನುಡಿಸುವಂತೆ ಬೇಡಿಕೊಂಡಿದ್ದಾರೆ.ಈ ವಚನದಲ್ಲಿ ಬಸವಣ್ಣನವರು ತಮ್ಮನ್ನು ತಾವು ದೇವರ ಕೈಯಲ್ಲಿರುವ 'ದಂಡಿಗೆ' ಇಂದಿನ ವೀಣೆಯಂತಹ ಒಂದು ತಂತಿ ವಾದ್ಯ ಮಾಡಲು ಕೇಳಿಕೊಳ್ಳುತ್ತಿದ್ದಾರೆ.ದೇಹ ಮತ್ತು ಶಿರ ನನ್ನ ದೇಹವನ್ನು ವಾದ್ಯದ ದಂಡವನ್ನಾಗಿಯೂ, ನನ್ನ ತಲೆಯನ್ನು ವಾದ್ಯಕ್ಕೆ ಬಳಸುವ ಒಣ-ಗಿದ ಸೋರೆಕಾಯಿಯ ಬುರುಡೆಯನ್ನಾಗಿಯೂ ಮಾಡು.ನರ ಮತ್ತು ಬೆರಳು: ನನ್ನ ದೇಹದ ನರಗಳನ್ನು ಆ ವಾದ್ಯದ ತಂತಿಗಳನ್ನಾಗಿ ಮಾಡು ಮತ್ತು ನನ್ನ ಬೆರಳುಗಳನ್ನೇ ಅದನ್ನು ನುಡಿಸುವ ಕಡ್ಡಿಯನ್ನಾಗಿ ಪರಿವರ್ತಿಸು.ಸಂಗೀತದ ನಾದ: ಹೇ ಕೂಡಲಸಂಗಮದೇವ, ನನ್ನನ್ನು ನಿನ್ನ ಎದೆಗೆ ಒತ್ತಿ ಹಿಡಿದು, ನಿನಗೆ ಇಷ್ಟ ಬಂದಂತೆ ಮೂವತ್ತೆರಡು ಬತ್ತೀಸ ರಾಗಗಳನ್ನು ಮಂಜುಳವಾಗಿ ನುಡಿಸು. ನನ್ನ ಜೀವನದ ಪ್ರತಿ ಕ್ಷಣವೂ ನಿನ್ನ ನಾದಮಯವಾಗಿರಲಿ ಎಂಬುದು ಇದರ ಆಶಯವಾಗಿದೆ.ಅಂದರೆ, "ನನ್ನಲ್ಲಿ ಯಾವುದೇ ಅಹಂಕಾರ ಉಳಿಯಬಾರದು, ನಾನು ಸಂಪೂರ್ಣವಾಗಿ ನಿನ್ನ ಇಚ್ಛೆಯಂತೆ ನಡೆಯುವ ನಿಮಿತ್ತ ಮಾತ್ರನಾಗಬೇಕು" ಎಂಬ ಪರಮ ಭಕ್ತಿಯ ಶರಣಾಗತಿಯ ಭಾವ ಇಲ್ಲಿದೆ. ಇಂಥಹ ವಚನಗಳು ಮನುಕುಲಕ್ಕೆ ದಾರಿದೀಪವಾಗಿವೆ. ನಾವು ನೀವು ವಚನದ ದಾರಿಯಲ್ಲಿ ಸಾಗೋಣ ಶರಣು ಶರಣಾರ್ಥಿಗಳು.

ಪಂಪಯ್ಯಸ್ವಾಮಿ ಸಾಲಿಮಠ
ಅಂತರಗಂಗಿ-ಸಿಂಧನೂರು. 998094144

ಕ್ರಾಂತಿಕಾರಿ ಕವಿ ಆರ್. ಹುಚ್ಚ ರೆಡ್ಡಿ ಅವರ ಸ್ಮರಣೆಯಲ್ಲಿ ಭಾವಪೂರ್ಣ ನುಡಿ ನಮನ

❑ ನೈಜ್ಯ ದೆಸೆ ನ್ಯೂಸ್



ದೇವದುರ್ಗ, ಅ.18:** ಕ್ರಾಂತಿಕಾರಿ ಕವಿ, ಗಾನ ಗರುಡಿಗ ಆರ್. ಹುಚ್ಚ ರೆಡ್ಡಿ ಅವರ ಎರಡನೇ ವರ್ಷದ ಸ್ಮರಣಾರ್ಥ ಕ್ರಾಂತಿಕಾರಿ ಸಾಂಸ್ಕೃತಿಕ ವೇದಿಕೆ (ಆರ್‌ಸಿ-ಎಫ್) ಜಿಲ್ಲಾ ಸಮಿತಿ ವತಿಯಿಂದ ದೇವದುರ್ಗದಲ್ಲಿ ಭಾವಪೂರ್ಣ ಶ್ರದ್ಧಾಂಜಲಿ ಹಾಗೂ ನುಡಿ ನಮನ ಕಾರ್ಯಕ್ರಮ ಹಮ್ಮಿಕೊಳ್ಳಲಾಯಿತು.ಕಾರ್ಯಕ್ರಮದಲ್ಲಿ ಮಾತನಾಡಿದ ಕ್ರಾಂತಿಕಾರಿ ಸಾಂಸ್ಕೃತಿಕ ವೇದಿಕೆಯ ಜಿಲ್ಲಾಧ್ಯಕ್ಷ ಹನುಮಂತಪ್ಪ ಮನ್ನಾಪೂರಿ ಅವರು, ಆರ್. ಹುಚ್ಚ ರೆಡ್ಡಿ ಅವರ ಕಲಾ ಪ್ರತಿಭೆ ಹಾಗೂ ಕ್ರಾಂತಿಕಾರಿ ಹಾಡುಗಳ ಮೂಲಕ ಜನರಲ್ಲಿ ಜಾಗೃತಿ ಮೂಡಿಸಿದ ಅವರ ಸೇವೆಯನ್ನು ಸ್ಮರಿಸಿದರು."ಹುಚ್ಚ ರೆಡ್ಡಿ ಅವರು ತಮಟೆ ನುಡಿಸಲು ಆರಂಭಿಸಿದರೆ ಜನರು ತಮ್ಮ ಕೆಲಸಗಳನ್ನು ಬಿಟ್ಟು ದಾರಿ ಹಿಡಿದು ಬಂದು ನಿಂತು ನೋಡುತ್ತಿದ್ದರು. ಅವರು ಹಾಡು ಹಾಡಿದರೆ ಕೇಳುಗರ ಮೈ ರೋಮಾಂಚನಗೊಳ್ಳುತ್ತಿತ್ತು. ಅವರ ಹಾಡುಗಳಲ್ಲಿ ಜನರ ನೋವು, ಹೋರಾಟ ಹಾಗೂ ಸಾಮಾಜಿ-ಕ ವಾಸ್ತವಗಳು ಪ್ರತಿಧ್ವನಿಸುತ್ತಿದ್ದವು"** ಎಂದು ಹೇಳಿದರು.'ಚೂರು ಚೂರಾಯಿತೋ ರಾಯಚೂರು, ಚೋರರ ಪಾಲಾಯಿತೋ ರಾಯಚೂರು' ಎಂಬ ಅವರ ಹಾಡಿನ ಸಾಲುಗಳನ್ನು ಸ್ಮರಿಸಿದ ಹನುಮಂತಪ್ಪ ಮನ್ನಾಪೂರಿ, ಆ ಹಾಡನ್ನು ತಾವು ನಿರಂತರವಾಗಿ ಕೇಳುತ್ತಿದ್ದು, ಅದರಲ್ಲಿರುವ ಸಾಮಾಜಿಕ ಕಳಕಳಿ ಇಂದಿಗೂ ಮನಸ್ಸಿನಲ್ಲಿ ಉಳಿದಿದೆ ಎಂದು ತಿಳಿಸಿದರು. ಕ್ರಾಂತಿಕಾರಿ ಕವಿ ಆರ್. ಹುಚ್ಚ ರೆಡ್ಡಿ ಅವರು ತಮ್ಮ ಹಾಡುಗಳು ಹಾಗೂ ತಮಟೆ ಕಲೆಯ ಮೂಲಕ ಜನಮನದಲ್ಲಿ ಅಚ್ಚಳಿಯದ ಗುರುತು ಮೂಡಿಸಿದ್ದಾರೆ. ಅವರ ಕ್ರಾಂತಿಕಾರಿ ಚಿಂತನೆಗಳು ಹಾಗೂ ಕಲಾಸೇವೆ ಮುಂದಿನ ಪೀಳಿಗೆಗೆ ಸ್ಫೂರ್ತಿಯಾಗಬೇಕು ಎಂದು ಈ ಸಂದರ್ಭದಲ್ಲಿ ಸ್ಮರಿಸಲಾಯಿತು.ಕಾರ್ಯಕ್ರಮದಲ್ಲಿ ಬುರ್ಜಪ್ಪ ಗಬ್ಬೂರು, ಬಸವರಾಜ ಜಯಂ, ನರಸಣ್ಣಗೌಡ, ಬಿ. ಗಣೇಕಲ್, ವೆಂಕಟೇಶ ಜಾಲಹಳ್ಳಿ, ಲಕ್ಷ್ಮಣ ಮಸರಕಲ್, ವಿಜಯಕುಮಾರ ಬಲ್ಲಿದೇವ್, ನಿರಂಜನ ಮಸರಕಲ್, ಭೀಮಣ್ಣ ಅಂಜಳ ಜಾಲಹಳ್ಳಿ, ಡೇವಿಡ್ ಮೈತ್ರಿ ಮಸರಕಲ್ ಸೇರಿದಂತೆ ಹಲವರು ಉಪಸ್ಥಿತ-ರಿದ್ದರು.ರದಿ: ಖಾಜಾ ಹುಸೇನ್ ಬಾಬಾ, ಜಾಲಹಳ್ಳಿ

ಸುದ್ದಿ ಮತ್ತು ಜಾಹೀರಾತಿಗಾಗಿ ಸಂಪರ್ಕಿಸಿ
9902277588

ಮಹಾರಾಣಾ ಪ್ರತಾಪ್ ಸಿಂಹರ ಕಂಚಿನ ಪ್ರತಿಮೆ ಉದ್ಘಾಟನೆಗೆ ಶಾಸಕ ನಾಡಗೌಡರಿಗೆ ಆಹ್ವಾನ

ತಾಳಿಕೋಟೆ ರಜಪೂತ ಸಮಾಜದ ಕಾರ್ಯಕ್ಕೆ ಮೆಚ್ಚುಗೆ; ಕಾರ್ಯಕ್ರಮದ ಯಶಸ್ಸಿಗೆ ಸಂಪೂರ್ಣ ಸಹಕಾರದ ಭರವಸೆ

❑ ನೈಜ್ಯ ದೆಸೆ ನ್ಯೂಸ್



ತಾಳಿಕೋಟೆ : ಪಟ್ಟಣದ ರಾಣಾ ಪ್ರತಾಪ್ ಸಿಂಹ ವೃತ್ತದಲ್ಲಿ ನೂತನವಾಗಿ ಪ್ರತಿಷ್ಠಾಪಿಸಿರುವ ಮಹಾರಾಣಾ ಪ್ರತಾಪ್ ಸಿಂಹಜೀರವರ ಕಂಚಿನ ಪ್ರತಿಮೆಯ ಉದ್ಘಾಟನಾ ಸಮಾರಂಭಕ್ಕೆ ಕರ್ನಾಟಕ ಸಾಬೂನು ಮತ್ತು ಮಾರ್ಜಕ ನಿಗಮದ ಅಧ್ಯಕ್ಷರು ಹಾಗೂ ಮುದ್ದೇಬಿಹಾಳ ಕ್ಷೇತ್ರದ ಶಾಸಕ ಸಿ.ಎಸ್. ನಾಡಗೌಡ (ಅಪ್ಪಾಜಿ) ಅವರನ್ನು ರಜಪೂತ ಸಮಾಜದ ವತಿಯಿಂದ ಆಹ್ವಾನಿಸಲಾಯಿತು. ರವಿವಾರ ಮುದ್ದೇಬಿಹಾಳ ಪಟ್ಟಣದಲ್ಲಿರುವ ಶಾಸಕ ಅಪ್ಪಾಜಿ ನಾಡಗೌಡರ ಕಚೇರಿಗೆ ಭೇಟಿ ನೀಡಿದ ರಜಪೂತ ಸಮಾಜದ ನಿಯೋಗವು, ನವೆಂಬರ್ 15ರಂದು ನಡೆಯಲಿರುವ ಪ್ರತಿಮೆ ಉದ್ಘಾಟನಾ ಸಮಾರಂಭದ ಕುರಿತು ಮಾಹಿತಿ ನೀಡಿ, ಕಾರ್ಯಕ್ರಮಕ್ಕೆ ಆಗಮಿಸುವಂತೆ ಅಧಿಕೃತವಾಗಿ ಆಹ್ವಾನಿಸಿತು.ಆಹ್ವಾನ ಸ್ವೀಕರಿಸಿ ಮಾತನಾಡಿದ ಶಾಸಕ ಅಪ್ಪಾಜಿ ನಾಡಗೌಡರು, "ರಜಪೂತ ಸಮಾಜ ನನ್ನ ಕ್ಷೇತ್ರದಲ್ಲಿನ ಸಣ್ಣ ಸಮಾಜವಾಗಿದ್ದರೂ, ತಾಳಿಕೋಟೆ ಪಟ್ಟಣದಲ್ಲಿ ಮಹಾರಾಣಾ ಪ್ರತಾಪ್ ಸಿಂಹರ ಹೆಸರಿನಲ್ಲಿ ಸುಂದರ ವೃತ್ತ ನಿರ್ಮಿಸಿ, ಅಭಿಮಾನದಿಂದ ಅವರ ಕಂಚಿನ ಪ್ರತಿಮೆಯನ್ನು ಲೋಕಾರ್ಪಣೆ ಮಾಡುತ್ತಿರುವುದು ಸಂತೋಷದ ಸಂಗತಿ. ಈ ಕಾರ್ಯಕ್ಕಾಗಿ ರಜಪೂತ ಸಮಾಜದವರನ್ನು ಅಭಿನಂದಿಸುತ್ತೇನೆ. ನಾನು ಕಾರ್ಯಕ್ರಮದಲ್ಲಿ ಭಾಗವಹಿಸುವುದರ ಜೊತೆಗೆ, ಇದರ ಯಶಸ್ಸಿಗೆ ಸಂಪೂರ್ಣ ಸಹಕಾರ ನೀಡುತ್ತೇನೆ" ಎಂದು ಭರವಸೆ ನೀಡಿದರು.ಈ ಸಂದರ್ಭದಲ್ಲಿ ರಜಪೂತ ಸಮಾಜದ ಅಧ್ಯಕ್ಷ ಹರಿಸಿಂಗ್ ಮೂಲಿಮನಿ, ಉಪಾಧ್ಯಕ್ಷ ರತನಸಿಂಗ್ ಕೊಕಟನೂರ, ಸಮಾಜದ ಮುಖಂಡ ಹಾಗೂ ಪುರಸಭೆಯ ಮಾಜಿ ಸದಸ್ಯ ಪ್ರಕಾಶ ಹಜೇರಿ, ವಿಠ್ಠಲಸಿಂಗ್ ಹಜೇರಿ, ಕಾಂಗ್ರೆಸ್ ಯುವ ಮುಖಂಡ ಸಂಗನಗೌಡ ಅಸ್ಕಿ ಸೇರಿದಂತೆ ಇತರರು ಉಪಸ್ಥಿತರಿದ್ದರು.

ಸ್ಮೈಲ್ಸ್ ಆಸ್ಪತ್ರೆಯಿಂದ ಉಚಿತ ಮೂಲವ್ಯಾಧಿ ತಪಾಸಣಾ ಶಿಬಿರ

ಪೈಲ್ಸ್ ಮುಕ್ತ ಭಾರತಕ್ಕೆ ಸಂಕಲ್ಪ : ಡಾ. ಸಿ.ಎಂ. ಪರಮೇಶ್ವರ

❑ ನೈಜ್ಯ ದೆಸೆ ನ್ಯೂಸ್





ಸಿಂಧನೂರು, ಅ.18: ರಾಜ್ಯಾದ್ಯಂತ ಸಂಚರಿಸಿ ಜನರಲ್ಲಿ ಮೂಲವ್ಯಾದಿ ಸಂಬಂಧಿತ ಕಾಯಿಲೆಗಳ ಬಗ್ಗೆ ಜಾಗೃತಿ ಮೂಡಿಸಿ, ಸೂಕ್ತ ತಪಾಸಣೆ ಹಾಗೂ ಚಿಕಿತ್ಸೆ ಮೂಲಕ ಪೈಲ್ಸ್ ಮುಕ್ತ ಭಾರತವನ್ನಾಗಿ ಮಾಡುವದು ನಮ್ಮ ಸಂಕಲ್ಪವಾಗಿದೆ ಎಂದು ಪ್ರಖ್ಯಾತ ಪೈಲ್ಸ್ ಮತ್ತು ಕರುಳಿನ ತಜ್ಞ ವೈದ್ಯರು ಹಾಗೂ ಸ್ಮೈಲ್ಸ್ ಆಸ್ಪತ್ರೆಯ ಮುಖ್ಯಸ್ಥರಾದ ಡಾ. ಸಿ.ಎಂ. ಪರಮೇಶ್ವರ ಹೇಳಿದರು.ನಗರದ ಐ.ಕೆ. ಯು.ಇ ಇಂಟರ್ ನ್ಯಾಸನಲ್ ಸ್ಕೂಲ್ (ಐಸಿ-ಎ[illegible]) ಮತ್ತು ಪಿಯು ಕಾಲೇಜಿನಲ್ಲಿ ಸ್ಮೈಲ್ಸ್ ಪೈಲ್ಸ್ (ಗ್ಯಾಸ್ಟ್ರೋಎಂಟರಾಲಜಿ) ಆಸ್ಪತ್ರೆ ಬೆಂಗಳೂರು, ಶಾಸಕ ಹಂಪನಗೌಡ ಬಾದರ್ಲಿ, ಉದ್ಯಮಿ ಹಂಚಿನಾಳ ಲಿಂಗರಾಜ ಪಾಟೀಲ್ ಅಭಿಮಾನಿಗಳ ಬಳಗದ ವತಿಯಿಂದ ಏಪ9ಡಿಸಿದ್ದ ಉಚಿತ ಮೂಲವ್ಯಾಧಿ ತಪಾಸಣಾ ಹಾಗೂ ಆರೋಗ್ಯ ಶಿಬಿರದಲ್ಲಿ ಮಾತನಾಡಿದರು. ಇತ್ತೀಚಿನ ದಿನಗಳಲ್ಲಿ ಮನುಷ್ಯನ ಜೀವನ ಶೈಲಿ ಬದಲಾಗುತ್ತ ಹೋಗುತ್ತಿದೆ, ಇದರಿಂದ ದೇಹಕ್ಕೆ ಬರುವ ರೋಗಗಳು ಸಹ ಬದಲಾಗುತ್ತಾ ಹೋಗುತ್ತಿದೆ, ಇತ್ತೀಚಿಗೆ ಕೋಲೊರೆಕ್ಟರ್ [illegible] ದೊಡ್ಡ ಕರುಳಿನ ಸಮಸ್ಯೆಗಳು ಪೈಲ್ಸ್, ಪಿಸ್ತೂಲಾ, ಮಲಬದ್ದತೆ ಮತ್ತು ದೊಡ್ಡಕರುಳಿನ ಕ್ಯಾನ್ಸರ್ ಗೆ ಸಂಬಂಧಪಟ್ಟಂತೆ ರೋಗಗಳು ಹೆಚ್ಚಾಗುತ್ತಾ ಹೋಗುತ್ತಿದೆ. ದೇಶದ 136 ಕೋಟಿ ಜನ ಸಂಖ್ಯೆಯಲ್ಲಿ ಶೇ.36% ರಷ್ಟು, ಅಂದರೆ ಸುಮಾರು ಐವತ್ತು ಕೋಟಿ ಜನಸಂಖ್ಯೆಗೆ ಈ ರೋಗಗಳು ಹುಟ್ಟಿನ ಮಗುವಿನಿಂದ ಹಿಡಿದು ವೃದ್ಧರಿಗೂ ಸಹ ಬರುತ್ತದೆ ಎಂದರು. ಪೈಲ್ಸ್ ಕಾಯಿಲೆ ಎಂದು ಹೇಳಿಕೊಳ್ಳಲು ನಾಚಿಕೆ, ಸಂಕೋಚ ಪಟ್ಟುಕೊಳ್ಳಬಾರದು ಎಂದು ಪ್ರತಿ ಶಿಬಿರದಲ್ಲಿ ಮಾಹಿತಿ ಮತ್ತು ಅರಿವು ಮೂಡಿಸಲಾಗುತ್ತಿದೆ. ಪೈಲ್ಸ್, ಫಿಷರ್ , ಪಿಸ್ತೂಲಾ, ಪಿಲೋನಿಡಲ್ ಸೈನಸ್, ಮಲಬದ್ದತೆ, ಕೊಲೊನ್ ಕ್ಯಾನ್ಸರ್, ಕ್ರೋನ್ಸ್, ಅಲ್ಸರೇಟಿವ್ ಕೊಲೈಟಿಸ್ ಮತ್ತು ಇತರ ಜೀರ್ಣಕಾರಿ ಅಸ್ವಸ್ಥತೆಗಳ ಇನ್ನಿತರ ಮೂಲವ್ಯಾದಿ ಸಂಬಂಧಿ ಕಾಯಿಲೆಗಳಿಗೆ ಭಯಪಡುವ ಅವಶ್ಯಕತೆ ಇಲ್ಲ, ರೈತರಿಗೆ ಕೂಲಿ ಕಾರ್ಮಿಕರಿಗೆ ಹಾಗೂ ಕಷ್ಟಪಡುವ ಜನರಿಗೆ ಅತಿ ಸುಲಭವಾಗಿ ಲೇಸರ್ ಚಿಕಿತ್ಸೆಯನ್ನು ನಮ್ಮ ಸಂಸ್ಥೆಯಲ್ಲಿ ಸೂಕ್ತ ಚಿಕಿತ್ಸೆಗಳನ್ನು ನೀಡಿ ಗುಣಮುಖಪಡಿಸಲಾಗಿದೆ ಎಂದು ಹೇಳಿದರು ಮೈಸೂರು ದಸರಾ ಉದ್ಘಾಟಿಸಿದ ಕೊಪ್ಪಳ ಗವಿಸಿದ್ದೇಶ್ವರ ಸ್ವಾಮೀಜಿ ಅವರನ್ನು ಭೇಟಿಯಾಗಿ ತಪಾಸಣಾ ಶಿಬಿರದ ಬಗ್ಗೆ ಮಾಹಿತಿ ನೀಡಿದಾಗ ನಮ್ಮ ಕೆಲಸದ ಬಗ್ಗೆ ಮೆಚ್ಚುಗೆ ವ್ಯಕ್ತಪಡಿಸಿದರು. ಅವರ ಆಶೀರ್ವಾದ ಪಡೆದು ತಪಾಸಣಾ ಶಿಬಿರ ಹಮ್ಮಿಕೊಳ್ಳಲಾಗುತ್ತದೆ, ಈಗಾಗಲೇ ಹಲವು ಶಿಬರಗಳನ್ನು ನಡೆಸಿ ಮೂಲವ್ಯಾದಿ ಸಂಬಂಧಿತ ರೋಗಗಳಿಗೆ ಚಿಕತ್ಸೆ ನೀಡಿದ್ದು, ತೀರಾ ಬಡವರು ಇದ್ದರೆ ಅಂತಹವರಿಗೆ ಉಚಿತ ಚಿಕತ್ಸೆ ಒದಗಿಸಲಾಗುವುದು ಎಂದರು ಡಾ. ಬಿ.ಎಂ.ಪಾಟೀಲ್ ಮಾತನಾಡಿ ಪ್ರತಿಯೊಬ್ಬರಿಗೂ ಆರೋಗ್ಯ ಬಹಳ ಮುಖ್ಯ. ಇಂದಿನ ದಿನಗಳಲ್ಲಿ ಪೈಲ್ಸ್ ಸಮಸ್ಯೆ ಹೆಚ್ಚಾಗಿದೆ. ಇದರಿಂದ ರೋಗಿಯು ಬಹಳಷ್ಟು ತೊಂದರೆ ಅನುಭವಿಸುತ್ತಿದ್ದಾರೆ. ನಾವು ಸರಿಯಾದ ಆಹಾರ ಪದ್ಧತಿ ಅನುಸ-ರಿಸಬೇಕು. ಜಂಕ್ ಫುಡ್, ಹೊರಗಿನ ತಿಂಡಿಂ-ಬನ್ನು ಸಂಪೂರ್ಣವಾಗಿ ನಿರ್ಲಕ್ಷಿಸಬೇಕು ಎಂದು ಸಲಹೆ ಮಾಡಿದರು ಕಾರ್ಯಕ್ರಮದ ಸಾನಿಧ್ಯವನ್ನು ವಹಿಸಿದ್ದ ಮೂರು ಮೈಲ್ ಕ್ಯಾಂಪ್ ನ ರಂಭಾಪುರಿ ಶಾಖಾ ಮಠದ ಸೋಮನಾಥ ಶಿವಾಚಾಯ9 ಸ್ವಾಮೀಜಿಗಳು ಆಶೀರ್ವಚನ ನೀಡಿದರು. ಉದ್ಯಮಿ ಎಸ್.ಲಿಂಗರಾಜ ಪಾಟೀಲ್ ಅಧ್ಯಕ್ಷತೆ ವಹಿಸಿದ್ದರು, ಉದ್ಯಮಿ, ಯುವ ಮುಖಂಡರಾದ ಅಮರೇಶ್ ಕರಡಿ ಅವರು ಮಾತನಾಡಿದರು. ವೇದಿಕೆಯಲ್ಲಿ ಗಣ್ಯರಾದ ತಿಮ್ಮಣ್ಣ ಸಾಹುಕಾರ್, ಬಸವರಾಜ ಪಾಟೀಲ್ ಗುಂಜಳ್ಳಿ, ಆಡನಗೌಡ ಪುಲಭಾವಿ, ವನಸಿರಿ ಫೌಂಡೇಶನ ಅಧ್ಯಕ್ಷ ಅಮರೇಗೌಡ ಮಲ್ಲಾಪುರ, ಸಮಾಜ ಸೇವಕ ಮುತ್ತು ಪಾಟೀಲ್, ರಾಮಚಂದ್ರ ರಾವ್, ಐಕ್ಯ ಶಾಲೆಯ ಸುಗುಣ, ಪ್ರಾಂಶುಪಾಲರಾದ ವಸಂತ, ಭೀಮನಗೌಡ ಹೊಸಪೇಟೆ, ಅನಂತ ಕುಮಾರ್, ರಮಾ ರಾಜಶೇಖರ್ ಇದ್ದರು. ಕು.ಅಭಿಶ್ರೀ ಪ್ರಾಥನೆಗೈದರು, ಮಲ್ಲೇಶಯ್ಯ ದಿನ್ನಿಮಠ ಸ್ವಾಗತಿಸಿದರು. ಮುತ್ತು ಪಾಟೀಲ್ ಪ್ರಾಸ್ತವಿಕವಾಗಿ ಮಾತನಾಡಿದರು.

● ಉತ್ತರ ಕನಾ9ಟಕ ಮಂದಿ ಹೆಚ್ಚು ಕ್ಯಾನ್ಸರ್ ಗೆ ತುತ್ತಾಗುತ್ತಿದ್ದಾರೆ. ಗುಟ್ಕಾ, ತಂಬಾಕು, ಮಸಲಾ ಸೇವನೆಯು ಇದಕ್ಕೆ ಕಾರಣವಾಗಿದೆ, ಕರುಳಿನ ಕ್ಯಾನ್ಸರ್ ನ್ನು ತಡವಾಗಿ ಪತ್ತೆ ಹಚ್ಚಲಾಗುತ್ತಿದೆ. ಮೃತಪಡುವ ಮುನ್ನ ಕಂಡು ಬರುತ್ತದೆ. ಪ್ಲಾಸ್ಟಿಕ್ ಬಳಕೆಯಿಂದಲೂ ಕ್ಯಾನ್ಸರ್ ಬರುತ್ತದೆ. ಜಂಕ್ ಫುಡ್ ತಿನ್ನುವ ಮೂಲಕ ಮಕ್ಕಳಿಗೆ ಭಯಾನಕ ಕಾಯಿಲೆ ಬರುತ್ತಿದೆ. ಈ ಖಾಯಿಲೆಗೆ ಒಂದು ಇಂಜೆಕ್ಷನ್ 1.5 ಲಕ್ಷ ರೂ. ಇದೆ. ಜಂಕ್ ಫುಡ್ ತಿನ್ನುವುದನ್ನು ನಿಲ್ಲಿಸಬೇಕು, ಇನ್ನೂ ತಂಪು ಪಾನಿಯಾಗಳನ್ನು ಕುಡಿಯುವುದರಿಂದ ಕ್ಯಾನ್ಸರ್ ರೋಗ ಬರುತ್ತಿದೆ

ಡಾ. ಸಿ.ಎಂ. ಪರಮೇಶ್ವರ : ಪ್ರಖ್ಯಾತ ಪೈಲ್ಸ್
ಮತ್ತು ಕರುಳಿನ ತಜ್ಞ ವೈದ್ಯರು ಹಾಗೂ ಸ್ಮೈಲ್ಸ್ ಆಸ್ಪತ್ರೆಯ ಮುಖ್ಯಸ್ಥರು

● ಸಾವಿರಕ್ಕೂ ಅಧಿಕ ಮಂದಿಗೆ ಉಚಿತ ತಪಾಸಣೆ ಹಾಗೂ ಔಷಧ ವಿತರಣೆ: ಐ.ಕೆ.ಯು.ಇ ಇಂಟರ್ ನ್ಯಾಸನಲ್ ಸ್ಕೂಲ್ (ಐಸಿಎ[illegible]) ಮತ್ತು ಪಿಯು ಕಾಲೇಜಿನಲ್ಲಿ ಏಪ9ಡಿಸಿದ್ದ ಪೈಲ್ಸ್ ತಪಾಸಣಾ ಶಿಬಿರದಲ್ಲಿ ಸಿಂಧನೂರು ಸೇರಿ ಸುತ್ತಲಿನ ತಾಲೂಕು ಹಾಗೂ ಇತರ ಕಡೆಗಳಿಂದ ಬಂದಿದ್ದ ಒಂದು ಸಾವಿರಕ್ಕೂ ಅಧಿಕ ಮಂದಿ ನೋಂದಣಿ ಮಾಡಿಕೊಂಡು, ತಪಾಸಣೆ ಪಡೆದರು. ಸ್ಮೈಲ್ಸ್ ಆಸ್ಪತ್ರೆ ಬೆಂಗಳೂರಿನಿಂದ 50ಕ್ಕೂ ಅಧಿಕ ವೈದ್ಯರು ಸಾವ9ಜನಿಕ-ರಿಗೆ ತಪಾಸಣೆ ಮಾಡಿ, ಜತೆಗೆ ಉಚಿತ ಔಷಧಗಳನ್ನುವಿತರಿಸಿದರು.

● ಬಡವರಿಗೆ ಆರೋಗ್ಯ ಎನ್ನುವುದು ಕೈಗೆ ಎಟುಗುತ್ತಿಲ್ಲ. ಇಂತಹ ಆರೋಗ್ಯ ಶಿಬಿರ ಮಾಡುವುದು ಶ್ಲಾಘನೀಯ. ಸರಿಯಾಗಿ ಚಿಕಿತ್ಸೆ ನೀಡುವ ಮೂಲಕ ಆರೋಗ್ಯ ಸುಧಾರಣೆಗೆ ವೈದ್ಯರ ಪಾತ್ರ ಮುಖ್ಯವಾಗಿದೆ. ಜನರು ಆರೋಗ್ಯದ ಕಡೆ ಹೆಚ್ಚು ಗಮನವನ್ನು ನೀಡಿ, ದುಶ್ಚಟಗಳಿಂದ ದೂರವಿರಬೇಕು

– ಸೋಮನಾಥ ಶಿವಾಚಾರ್ಯ ಸ್ವಾಮೀಜಿ, ಮೂರು ಮೈಲ್ ಕ್ಯಾಂಪ್

● ನಾನು ಮೂಲವ್ಯಾಧಿ ಸಮಸ್ಯೆಯಿಂದ ಬಳಲುತ್ತಿದ್ದೆ. ಸ್ಮೈಲ್ಸ್ ಆಸ್ಪತ್ರೆಯ ಡಾ. ಪರಮೇಶ್ವರ ಅವರು ಸೂಕ್ತ ಚಿಕಿತ್ಸೆ ನೀಡಿದ್ದ-ರಿಂದ ಸಮಸ್ಯೆ ದೂರವಾಗಿದೆ. ಕಲ್ಯಾಣ ಕರ್ನಾಟಕ ಭಾಗದಲ್ಲಿ ಆಸ್ಪತ್ರೆ ಯಿಂದ ಹೆಚ್ಚು ಹೆಚ್ಚು ತಪಾಸಣೆ ಶಿಬಿರ ನಡೆಯಲಿ. ಬಡವರಿಗೆ ಕಡಿಮೆ ವೆಚ್ಚದಲ್ಲಿ ಸೂಕ್ತ ಚಿಕತ್ಸೆ ಸಿಗಬೇಕು.

– ಅಮರೇಶ್ ಕರಡಿ, ಉದ್ಯಮಿ. ಯುವ ಮುಖಂಡರು.

ಹಾಡಿನ ಚಿತ್ರೀಕರಣದೊಂದಿಗೆ 'ಚಂದ್ರಗಿರಿ' ಚಿತ್ರೀಕರಣ ಮುಕ್ತಾಯ

❑ ನೈಜ್ಯ ದೆಸೆ ನ್ಯೂಸ್



ಬೆಂಗಳೂರು: ಸ್ನೇಹಾಲಯಂ ಕ್ರಿಯೇಷನ್ಸ್ ಬ್ಯಾನರ್ ಅಡಿಯಲ್ಲಿ ಕೆ.ಎಸ್. ಪಂಚಾಕ್ಷರಯ್ಯ, ಯಶಸ್, ಚಿದಾನಂದಪ್ಪ ಕನಕಗಿರಿ, ಮ-ರಿಸ್ವಾಮಿ ಹಾಗೂ ಅಹಿನಾ ಮನೋ ಜಂ-ಟಿಯಾಗಿ ನಿರ್ಮಿಸುತ್ತಿರುವ ಬಹುನಿರೀಕ್ಷಿತ 'ಚಂದ್ರಗಿರಿ' ಚಿತ್ರದ ಚಿತ್ರೀಕರಣ ಯಶಸ್ವಿಯಾಗಿ ಪೂರ್ಣಗೊಂಡಿದೆ. ಬೆಂಗಳೂರು ಗ್ರಾಮಾಂತರ ಜಿಲ್ಲೆಯ ಹೊಸಕೋಟೆ ತಾಲೂಕಿನ ಗಣಗಲು ಗ್ರಾಮದ ಶ್ರೀ ಗಡದಮ್ಮ ತಾಯಿ ಸನ್ನಿಧಾನದಲ್ಲಿ ಈ ಹಿಂದೆ 'ಮಾಯಾವಿ' ಚಿತ್ರದಲ್ಲಿ ನಾಯಕನಾಗಿ ಅಭಿನಯಿಸಿದ್ದ ನಟ ರಘುರಾಮ್ ಅಭಿನಯದಲ್ಲಿ ಮೂಡಿಬಂದ 'ನನ್ನದು ನಮ್ಮದು ಎಲ್ಲಾ ಸುಳ್ಳು, ಅರಿಯೋ ನೀ ಮೊದಲು...' ಎಂಬ ವಿಶೇಷ ಹಾಡಿನ ಚಿತ್ರೀಕರಣದೊಂದಿಗೆ ಚಿತ್ರತಂಡ ಕುಂಬಳಕಾಯಿ ಒಡೆದು ಚಿತ್ರೀಕರಣಕ್ಕೆ ಅಧಿಕೃತವಾಗಿ ತೆರೆ ಎಳೆದಿದೆ. ಚಿತ್ರದ ನಿರ್ದೇಶಕ ರಾಜೀವ್ ಕೃಷ್ಣ ಅವರೇ ಸಂಗೀತ ಸಂಯೋಜಿಸಿ, ನೃತ್ಯ ನಿರ್ದೇಶನವನ್ನೂ ಮಾಡಿದ್ದು, ವಿಭಿನ್ನ ಕಥಾ ಹಂದರದೊಂದಿಗೆ ಪ್ರೇಕ್ಷಕರ ಮುಂದೆ ಬರಲು ಸಜ್ಜಾಗುತ್ತಿರುವ 'ಚಂದ್ರಗಿರಿ' ಚಿತ್ರವು ಭಯಾನಕ ಸನ್ನಿವೇಶಗಳು, ಕುತೂಹಲಕಾರಿ ತಿರುವುಗಳು, ರೋಚಕ ಘಟನಾವಳಿಗಳನ್ನೊಳಗೊಂಡ ಹಾರರ್, ಸಸ್ಪೆನ್ಸ್ ಮತ್ತು ಥ್ರಿಲ್ಲರ್ ಚಿತ್ರವಾಗಿದೆಚಿತ್ರದಲ್ಲಿ ಹಿರಿಯ ನಟ ಶೋಭರಾಜ್, ಪಂಚಾಕ್ಷರಯ್ಯ, ಯಶಸ್, ಮರಿಸ್ವಾಮಿ, ಶಿಲ್ಪಾ ಶ್ರೀನಿವಾಸ್, ಉಗ್ರಂ ರವಿ, ಬಲರಾಮ್ ಪಾಂಚಾಳ್, ಕಿಶೋರ್ ಕಾಸರಗೋಡು, ರಘುರಾಮ್, ರೂಪಶ್ರೀ, ನಂದಿನಿ ಕಮ್ಮಯ್ಯ, ಶಶಿರೇಖ, ಮಾಸ್ಟರ್ ವೀರಧನುಷ್ ಸೇರಿದಂತೆ ಪ್ರಮುಖ ಕಲಾವಿದ-ರಿದ್ದಾರೆ. ಬಹುಮುಖ ಪ್ರತಿಭೆ ರಾಜೀವ್ ಕೃಷ್ಣ ಕಥೆ-ಚಿತ್ರಕಥೆ-ಸಂಭಾಷಣೆ ಬರೆದು ನಿರ್ದೇಶನ ಮಾಡಿರುವುದಲ್ಲದೆ, ಸಂಗೀತ ಸಂಯೋಜನೆ, ನೃತ್ಯ ನಿರ್ದೇಶನ ಕೂಡ ಮಾಡಿದ್ದಾರೆ. ಗುರುದತ್ ಮುಸರಿ ಛಾಯಾಗ್ರಹಣ, ಯುವರಾಜ್ ಬಿ. ಸಂಕಲನ, ವೈಲೆಂಟ್ ವೇಲು ಸಾಹಸ ನಿರ್ದೇಶನ, ದೇವು ಕೆ.ಅಂಬಿಗ ಗೀತಸಾಹಿತ್ಯ,-ಎಂ.ಜಿ.ಕ್ಲೇಶ, ಡಾ.ಪ್ರಭು ಗಂಜಿಹಾಳ, ಡಾ.ವೀರೇಶ ಹಂಡಿಗಿ, ವಿ.ಎಂ.ಎಸ್.ಗೋಪಿ ಪಿಆರ್ ಓ ಆಗಿದ್ದು, ಮಲ್ಲಿ ಕೆ. ವಡ್ಡರಹಟ್ಟಿ ಸಹ ನಿರ್ದೇಶನವಿದೆ. ಚಿತ್ರೀಕರಣವನ್ನು ಯಶಸ್ವಿಯಾಗಿ ಪೂರ್ಣಗೊಳಿಸಿರುವ ಚಿತ್ರತಂಡ ಇದೀಗ ಪೋಸ್ಟ್ ಪ್ರೊಡಕ್ಷನ್ ಕಾರ್ಯ ನಡೆಸಿದ್ದು, ಇದೆ ಡಿಸೆಂಬರ್ ತಿಂಗಳಲ್ಲಿ ರಾಜ್ಯಾದ್ಯಂತ ತೆರೆಗೆ ತರಲು ಯೋಜನೆ ರೂಪಿಸಿದೆ. ವಿಭಿನ್ನ ಕಥಾವಸ್ತು, ಅನುಭವಿ ಕಲಾವಿದರ ಅಭಿನಯ, ತಾಂತ್ರಿಕ ಶ್ರೀಮಂತಿ-ಕೆಯೊಂದಿಗೆ ಮೂಡಿಬರುತ್ತಿರುವ 'ಚಂದ್ರಗಿರಿ' ಚಿತ್ರವು ಕನ್ನಡ ಸಿನಿಪ್ರೇಕ್ಷಕರಲ್ಲಿ ಕುತೂಹಲ ಮೂಡಿಸುವ ನಿರೀಕ್ಷೆಯನ್ನು ಚಿತ್ರತಂಡ ಹೊಂದಿದೆ. ಡಾ.ಪ್ರಭು ಗಂಜಿಹಾಳ

OWNER, PUBLISHER, PRINTER BY IRFAN K H NO. 3/117, BALAGANUR, SINDHANOOR, RAICHUR-584138 KARNATAKA AND PRINTED AT SHIVANI PRINTERS, HULKOTI, NEW COURT, OPPOSITE PLOT NO. 28 RS NO. 312/3B, GARAG COMPLEX, GADAG-582101